ಶುಕ್ರವಾರ 05.12.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 116
Digital Varthe Kannada Daily
Volume 01 - Issue 116
Friday 05.12.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

## ಮೂರು ತಿಂಗಳ ಹಿಂದೆ ಮದುವೆಯಾಗಿದ್ದ ನವವಿವಾಹಿತೆ ಆತ್ಮ ಹತ್ಯೆ..!!



ಪ್ರೀತಿ ಮಾಡಿ, ಮದುವೆಯಾಗಿ ಮೂರೇ ತಿಂಗಳಾದ 23 ವರ್ಷದ ನವವಿವಾಹಿತೆ ಅಮೂಲ್ಯ (23) ನೇಣಿಗೆ ಶರಣಾಗಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಹಿಂದೆ ಅಂದ್ರಹಳ್ಳಿಯ ವಾಸ್ತವ್ಯ ಹೊಂದಿದ್ದ ಅಮೂಲ್ಯ ಮತ್ತು ವಿದ್ಯಾಮಾನ ನಗರದ ವಾಸ್ತವ್ಯದ ಅಭಿಷೇಕ್ (30) ಆಸುಪಾಸಿನ ನಗರದವಗರಾಗಿದ್ದರು. ಇಬ್ಬರ ನಡುವೆ ಪ್ರೀತಿಯಾಗಿದೆ. ಸುಮಾರು ಮೂರು ತಿಂಗಳ ಹಿಂದೆ ಇಬ್ಬರೂ ಕುಟುಂಬದವರ ಒಪ್ಪಿಗೆಯೊಂದಿಗೆ ವಿವಾಹವಾಗಿದ್ದರು. ಆದರೆ ಜೀವನ ಇನ್ನೂ ಜೀವನ ಪ್ರಾರಂಭಿಸುವ ಮೊದಲೇ ವಧು ಅಮೂಲ್ಯ ಆತ್ಮಹತ್ಯೆ ಮಾಡಿಕೊಂಡು ಸಾವನ್ನಪ್ಪಿದ್ದಾರೆ.

ಈ ದುರಂತದ ನಂತರ ಅಮೂಲ್ಯರ ಕುಟುಂಬದವರು ವರನ ಕುಟುಂಬದವರ ಮೇಲೆ ಗಂಭೀರ ಆರೋಪ ಮಾಡಿದ್ದಾರೆ. ನಮ್ಮ ಮಗಳ ಸಾವಿನ ಹಿಂದೆ ಅಭಿಷೇಕ್ ಮತ್ತು ಅವರ ಕುಟುಂಬದವರೇ ಕಾರಣ. ನನ್ನ ಮಗಳಿಗೆ ಮಾನಸಿಕ ಕಿರುಕುಳ ನೀಡುತ್ತಿದ್ದರು. ಗಂಡ ಮತ್ತು ಅತ್ತೆ ಸೇರಿ ನನ್ನ ಮಗಳಿಗೆ ಹಿಂಸೆ ಕೊಟಿದ್ದಾರೆ ಎಂದು ಅಮೂಲ್ಯ ತಾಯಿ ಗಂಭೀರ ಆರೋಪ ಮಾಡಿದ್ದಾರೆ. ಸಾವಿಗೆ ನಿಖರವಾದ ಕಾರಣ ಏನು..? ಅಮೂಲ್ಯಗೆ ಮಾನಸಿಕ ಹಿಂಸೆ ನೀಡಿದ್ದಾರೆಯೇ..? ಅಮೂಲ್ಯ ತಾಯಿ ಮಾಡುತ್ತಿರುವ ಆರೋಪ ನಿಜವೇ ಎಂಬುದನ್ನ ಪೊಲೀಸರು ತನಿಖೆ ಆರಂಭಿಸಿದ್ದಾರೆ.

ಈ ಘಟನೆಯ ನಂತರ ಬ್ಯಾಡರಹಳ್ಳಿ ಪೊಲೀಸ್ ಠಾಣೆಯಲ್ಲಿ ಅಮೂಲ್ಯರ ಕುಟುಂಬದವರಿಂದ ದೂರು ದಾಖಲಾಗಿದೆ. ಪೊಲೀಸರು ಘಟನಾ ಸ್ಥಳಕ್ಕೆ ತೆರಳಿ ಸ್ಥಳ ಪರಿಶೀಲನೆ ನಡೆಸಿದ್ದಾರೆ. ಸಾವಿನ ನಿಖರ ಕಾರಣ ತಿಳಿಯಲು ಪೊಲೀಸರು ತನಿಖೆ ಪ್ರಾರಂಭಿಸಿದ್ದಾರೆ. ಸಂಬಂಧಿತ ಎಲ್ಲರ ವಿವರಗಳನ್ನು ಪಡೆದು ವಿಚಾರಣೆ ನಡೆಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ನಿರ್ಮಾಣ ಹಂತದ ಕಟ್ಟಡದಿಂದ ಜಿಗಿದು ವ್ಯಕ್ತಿ ಆತ್ಮಹತ್ಯೆ


ಬೃಹತ್ ಮತ್ತು ವೇಗವಾಗಿ ಬೆಳೆಯುತ್ತಿರುವ ಬೆಂಗಳೂರು ಮಹಾನಗರದಲ್ಲಿ ಒಂದರ ಹಿಂದೆ ಒಂದರಂತೆ ನಡೆಯುತ್ತಿರುವ ಆತ್ಮಹತ್ಯೆ ಪ್ರಕರಣಗಳು ಆತಂಕಕಾರಿ ಸನ್ನಿವೇಶವನ್ನು ಸೃಷ್ಟಿಸಿವೆ. ಇದೀಗ ನಗರದ ಐಟಿ ಹಬ್ ಎಂದೇ ಕರೆಯಲಾಗುವ ವೈಟ್‌ಫೀಲ್ಡ್ ಪ್ರದೇಶದಲ್ಲಿ ಮತ್ತೊಂದು ದುರಂತ ಸಂಭವಿಸಿದ್ದು, ವ್ಯಕ್ತಿಯೊಬ್ಬರು ನಿರ್ಮಾಣ ಹಂತದ ಬಹುಮಹಡಿ ಕಟ್ಟಡದಿಂದ ಜಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ವೈಟ್‌ಫೀಲ್ಡ್‌ನಲ್ಲಿ ಮೌನವಾದ ಆಕ್ರಂದನ

ಈ ಘಟನೆ ವೈಟ್‌ಫೀಲ್ಡ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಮೃತ ವ್ಯಕ್ತಿಯನ್ನು ಮುರಳಿ ಎಂದು ಗುರುತಿಸಲಾಗಿದೆ. ಮುರಳಿ ಅವರು ನಿರ್ಮಾಣ ಹಂತದಲ್ಲಿದ್ದ ಕಟ್ಟಡದ ಮೇಲೇರಿ, ಅಲ್ಲಿಂದ ಕೆಳಗೆ ಜಿಗಿದು ಜೀವ ಕಳೆದುಕೊಂಡಿದ್ದಾರೆ ಎಂದು ತಿಳಿದುಬಂದಿದೆ. ಸ್ಥಳೀಯರು ಈ ಭೀಕರ ದೃಶ್ಯವನ್ನು ಕಂಡ ತಕ್ಷಣ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

## ಪತ್ನಿಯನ್ನ ಕೊಂದು ಬಿಎಂಟಿಸಿ ನಿವೃತ್ತ ಚಾಲಕ ಆತ್ಮ ಹತ್ಯೆ





**ಬೆಂಗಳೂರು:** ಪತ್ನಿಯ ಕುತ್ತಿಗೆಗೆ ವೈರ್‌ನಿಂದ ಬಿಗಿದು ಕೊಲೆ ಮಾಡಿದ ಬಳಿಕ ಪತಿ ಅದೇ ವೈರ್‌ನಿಂದ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಆಘಾತಕಾರಿ ಘಟನೆಯು ಬೆಂಗಳೂರಿನಲ್ಲಿ ನಡೆದಿದೆ. ದಂಪತಿಗಳ ನಡುವಿನ ನಿರಂತರ ಜಗಳ ಈ ಘಟನೆಗೆ ಕಾರಣ ಎಂದು ಪೊಲೀಸರು ಶಂಕಿಸಿದ್ದಾರೆ.ಈ ಘಟನೆ ಸಂಬಂಧ ಬೆಂಗಳೂರಿನ ಸುಬ್ರಮಣ್ಯಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮೃತರನ್ನು 65 ವರ್ಷ ವಯಸ್ಸಿನ ಬೇಬಿ (ಪತ್ನಿ) ಮತ್ತು 65 ವರ್ಷ ವಯಸ್ಸಿನ ವೆಂಕಟೇಶನ್ (ಪತಿ) ಎಂದು ಗುರುತಿಸಲಾಗಿದೆ. ವೆಂಕಟೇಶನ್ ಅವರು ವೃತ್ತಿಯಲ್ಲಿ ಬಿಎಂಟಿಸಿ (BMTC) ಬಸ್ ಚಾಲಕರಾಗಿ ಸೇವೆ ಸಲ್ಲಿಸಿ ಇತ್ತೀಚೆಗೆ ನಿವೃತ್ತರಾಗಿದ್ದರು. ಪತ್ನಿ ಬೇಬಿ ಅವರಿಗೆ ಅನಾರೋಗ್ಯದ ಸಮಸ್ಯೆಗಳಿದ್ದು, ಪಾರ್ಶ್ವವಾಯು ಪೀಡಿತರಾಗಿದ್ದರಿಂದ ಅವರು ವೀಲ್ ಚೇರ್ ನಲ್ಲಿಯೇ ಓಡಾಡುತ್ತಿದ್ದರು. ಪ್ರಾಥಮಿಕ ತನಿಖೆಗಳ ಪ್ರಕಾರ, ವೆಂಕಟೇಶನ್ ಮತ್ತು ಬೇಬಿ ದಂಪತಿಗಳ ನಡುವೆ ಕಳೆದ ಕೆಲವು ದಿನಗಳಿಂದ ನಿರಂತರವಾಗಿ ಜಗಳ ನಡೆಯುತ್ತಿತ್ತು. ವಯಸ್ಸಾದ ಕಾರಣದಿಂದ, ಅನಾರೋಗ್ಯದ ಸಮಸ್ಯೆಗಳು, ಮತ್ತು ನಿವೃತ್ತಿಯ ನಂತರದ ಆರ್ಥಿಕ ಸಮಸ್ಯೆ ಮತ್ತು ದೈಹಿಕ ಒತ್ತಡಗಳು ಈ ದಂಪತಿಗಳ ನಡುವೆ ಬಿರುಕು ಮೂಡುಸಿತ್ತು.


ದಿನನಿತ್ಯದ ಸಣ್ಣಪುಟ್ಟ ವಿಷಯಗಳಿಗೆ ಸಹ ಗಂಡ-ಹೆಂಡತಿ ನಡುವೆ ಜಗಳವಾಗುತ್ತಿತ್ತು. ಮಕ್ಕಳು ಮನೆಯಿಂದ ಹೊರಗಡೆ ಹೋದಾಗ, ದಂಪತಿಗಳು ತೀವ್ರ ಜಗಳ ಮಾಡುತ್ತಿದ್ದರು ಎಂದು ತಿಳಿದುಬಂದಿದೆ.

ಘಟನೆ ನಡೆದ ದಿನವೂ ದಂಪತಿಗಳ ನಡುವೆ ದೊಡ್ಡ ಮಟ್ಟದ ಗಲಾಟೆ ನಡೆದಿದೆ ಎನ್ನಲಾಗಿದೆ. ಜಗಳ ತೀವ್ರವಾದಾಗ, ಕೋಪದ ಭರದಲ್ಲಿ ವೆಂಕಟೇಶನ್ ಅವರು ಮನೆಯಲ್ಲಿದ್ದ ವೈರ್ ಒಂದನ್ನು ತೆಗೆದುಕೊಂಡು ಪತ್ನಿ ಬೇಬಿ ಅವರ ಕುತ್ತಿಗೆಗೆ ಬಿಗಿದಿದ್ದಾರೆ. ಪಾರ್ಶ್ವವಾಯು ಪೀಡಿತರಾಗಿದ್ದ ಬೇಬಿ ಎನ್ನನ್ನು ಪ್ರತಿಕ್ರಿಯಿಸಲು ಸಾಧ್ಯವಾಗದೆ ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ. ಪತ್ನಿಯ ಕೊಲೆಯಾದ ಬಳಿಕ, ಆಘಾತಕ್ಕೊಳಗಾದ ವೆಂಕಟೇಶನ್ ಅವರು ತೀವ್ರ ಮನನೊಂದಿದ್ದಾರೆ. ತಾವು ಮಾಡಿದ ಕೃತ್ಯದ ಅರಿವಾಗಿ, ಅದೇ ವೈರ್ ಅನ್ನು ಬಳಸಿ ತಮ್ಮ ಕುತ್ತಿಗೆ ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ದಂಪತಿಗಳ ಸಾವಿನ ಕುರಿತು ಮಾಹಿತಿ ತಿಳಿದ ತಕ್ಷಣವೇ ಸುಬ್ರಮಣ್ಯಪುರ ಪೊಲೀಸರು ಘಟನಾ ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ. ಪೊಲೀಸರು ಕೊಲೆ ಮತ್ತು ಆತ್ಮಹತ್ಯೆಯಾದ ಸ್ಥಳವನ್ನು ಸೂಕ್ಷ್ಮವಾಗಿ ಪರಿಶೀಲಿಸಿದ್ದು, ದಂಪತಿಗಳ ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ರವಾನಿಸಿದ್ದಾರೆ.

ಸುದ್ದಿ ಹಾಗೂ
ಜಾಹಿರಾತುಗಳಿಗಾಗಿ
ಸಂಪರ್ಕಿಸಿ:
9538786812
9880655634

## ಅಕ್ರಮವಾಗಿ ರಕ್ತಚಂದನ ಸಾಗಿಸುತ್ತಿದ್ದ ನಾಲ್ವರು ಅರೆಸ್ಟ್: ₹1.35 ಕೋಟಿ ಮೌಲ್ಯದ ರಕ್ತಚಂದನ ವಶ




**ಬೆಂಗಳೂರು:** ದೇಶಾದ್ಯಂತ ಅಪಾರ ಬೇಡಿಕೆ ಮತ್ತು ಹೆಚ್ಚಿನ ಬೆಲೆ ಹೊಂದಿರುವ, ರಕ್ತಚಂದನದ ಅಕ್ರಮ ಸಾಗಾಟ ಮತ್ತು ಮಾರಾಟದ ಜಾಲವನ್ನು ಬೆಂಗಳೂರು ಪೊಲೀಸರು ಭೇದಿಸಿದ್ದಾರೆ. ನಗರದ ಹುಳಿಮಾವು ಮತ್ತು ಆರ್.ಟಿ ನಗರ (R.T. Nagar) ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿ ನಡೆಸಿದ ಪ್ರತ್ಯೇಕ ಕಾರ್ಯಾಚರಣೆಗಳಲ್ಲಿ ಒಟ್ಟು 1,889 ಕೆ.ಜಿ ರಕ್ತಚಂದನವನ್ನು ವಶಪಡಿಸಿಕೊಳ್ಳಲಾಗಿದ್ದು, ಇದರ ಒಟ್ಟು ಮೌಲ್ಯ ₹1.35 ಕೋಟಿ ರೂಪಾಯಿ ಎಂದು ಅಂದಾಜಿಸಲಾಗಿದೆ. ಈ ಅಕ್ರಮ ಸಾಗಾಟದಲ್ಲಿ ಭಾಗಿಯಾಗಿದ್ದ ನಾಲ್ವರು ಆರೋಪಿಗಳನ್ನ ಪೊಲೀಸರು ಬಂಧಿಸಿದ್ದಾರೆ.

ಈ ಎರಡು ಪ್ರತ್ಯೇಕ ಕಾರ್ಯಾಚರಣೆಗಳಲ್ಲಿ ಬಂಧಿತರಾದ ನಾಲ್ವರ ಪೈಕಿ, ಇಬ್ಬರು ಉನ್ನತ ಶಿಕ್ಷಣ ಪಡೆದವರು ಎಂಬುದು ಆಶ್ಚರ್ಯದ ಸಂಗತಿಯಾಗಿದೆ. ಆರ್.ಟಿ ನಗರದಲ್ಲಿ ಅರೆಸ್ಟ್ ಆದ ಆರೋಪಿಗಳು, ವರಪ್ರಸಾದ್ ರೆಡ್ಡಿ, ರಾಜ್‌ಶೇಖರ್ ಇವರು ಮೂಲತಃ ಆಂಧ್ರಪ್ರದೇಶದ ಅಣ್ಣಮಯ್ಯ ಜಿಲ್ಲೆಯವರಾಗಿದ್ದಾರೆ ಎಂದು ತಿಳಿದುಬಂದಿದೆ. ಬಂಧಿತರಾದ ವರಪ್ರಸಾದ್ ರೆಡ್ಡಿ ಮತ್ತು ರಾಜ್‌ಶೇಖರ್ ಅವರಲ್ಲಿ ಓರ್ವ ಬಿ.ಇ (B.E.) ಪದವಿ ಪಡೆದಿದ್ದರೆ, ಇನ್ನೊಬ್ಬ ಎಂಬಿಎ (M.B.A.) ಪದವೀಧರನಾಗಿದ್ದಾನೆ ಎಂದು ತಿಳಿದುಬಂದಿದೆ. ಇನ್ನೂ ಹುಳಿಮಾವಿನಲ್ಲಿ ಅರೆಸ್ಟ್ ಆದ ಇಬ್ಬರು ಆರೋಪಿಗಳ ಗುರುತು ಇನ್ನೂ ತಿಳಿದು ಬರಬೇಕಿದೆ.

ಹುಳಿಮಾವಿನಲ್ಲಿ 1,150 ಕೆಜಿ ವಶ

ಮೊದಲ ಪ್ರಕರಣವು ಹುಳಿಮಾವು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಇಲ್ಲಿ ರಕ್ತಚಂದನವನ್ನು ಸಾಗಾಟ ಮಾಡುತ್ತಿದ್ದ ಇಬ್ಬರು ಆರೋಪಿಗಳನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಆರೋಪಿಗಳು ಪೊಲೀಸರಿಂದ ತಪ್ಪಿಸಿಕೊಳ್ಳಲು ವಿಶಿಷ್ಟ ಮಾರ್ಗವನ್ನು ಅನುಸರಿಸಿದ್ದರು. ಅದೇನೆಂದರೆ ಅವರು ಪ್ರಯಾಣಿಸುತ್ತಿದ್ದ ಕಾರಿನ ಹಿಂಬದಿ ಸೀಟುಗಳನ್ನು ತೆಗೆದು, ಅದರ ಕೆಳಭಾಗದಲ್ಲಿ ರಕ್ತಚಂದನದ ತುಂಡುಗಳನ್ನು ಜೋಡಿಸಿಟ್ಟಿದ್ದರು. ಈ ರಕ್ತಚಂದನವನ್ನು ಮಾರಾಟ ಮಾಡಲು ತಮಿಳುನಾಡು ಕಡೆಗೆ ಸಾಗಿಸುತ್ತಿರುವ ಬಗ್ಗೆ ಖಚಿತ ಮಾಹಿತಿ ಪಡೆದ ಹುಳಿಮಾವು ಪೊಲೀಸರು ಕಾರನ್ನು ಅಡ್ಡಗಟ್ಟಿ ತಪಾಸಣೆ ನಡೆಸಿದರು. ಈ ವೇಳೆ, 60 ಲಕ್ಷ ರೂ. ಮೌಲ್ಯದ 1,150 ಕೆಜಿ ರಕ್ತಚಂದನ ಪತ್ತೆಯಾಗಿದೆ. ಇಬ್ಬರು ಆರೋಪಿಗಳನ್ನು ಬಂಧಿಸಲಾಗಿದೆ.

ಆರ್.ಟಿ ನಗರದಲ್ಲಿ 739 ಕೆಜಿ ವಶ

ಎರಡನೇ ಕಾರ್ಯಾಚರಣೆ ಆರ್.ಟಿ ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನವೆಂಬರ್ 29 ರಂದು ನಡೆದಿದೆ. ಉನ್ನತ ಶಿಕ್ಷಣ ಪಡೆದಿದ್ದ ಇಬ್ಬರು ಆಂಧ್ರಪ್ರದೇಶದ ಆರೋಪಿಗಳು ಇಲ್ಲಿ ಪೊಲೀಸರ ಬಲೆಗೆ ಬಿದ್ದಿದ್ದಾರೆ.

ಆರೋಪಿಗಳು ಬೊಲೆರೋ ವಾಹನದಲ್ಲಿ ರಕ್ತಚಂದನವನ್ನು ಸಾಗಿಸುತ್ತಿದ್ದರು. ಚೆಕ್‌ಪೋಸ್ಟ್‌ಗಳನ್ನು ತಪ್ಪಿಸಿ ಅಕ್ರಮವಾಗಿ ಗಡಿಯಾಚೆಗೆ ರವಾನೆ ಮಾಡಲು ಪ್ರಯತ್ನಿಸುತ್ತಿದ್ದಾಗ ಪೊಲೀಸರು ದಾಳಿ ನಡೆಸಿದರು.

ಆರ್.ಟಿ ನಗರ ಪೊಲೀಸರ ತಪಾಸಣೆ ವೇಳೆ, ಸುಮಾರು 75 ಲಕ್ಷ ರೂ. ಮೌಲ್ಯದ 7 ಅಡಿ ಉದ್ದದ 50 ರಕ್ತಚಂದನ ಪೀಸ್‌ಗಳು ಪತ್ತೆಯಾಗಿವೆ. ಇವುಗಳ ಒಟ್ಟು ತೂಕ 739 ಕೆ.ಜಿ ಇತ್ತು. ಅಣ್ಣಮಯ್ಯ ಜಿಲ್ಲೆಯ ವರಪ್ರಸಾದ್ ರೆಡ್ಡಿ ಮತ್ತು ರಾಜ್‌ಶೇಖರ್ ಎಂಬ ಇಬ್ಬರು ಆರೋಪಿಗಳನ್ನು ಬಂಧಿಸಿ, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ದಿನೇ ದಿನೇ ಹೆಚ್ಚುತ್ತಿರುವ ರಕ್ತಚಂದನದ ಅಕ್ರಮ ಸಾಗಾಟವನ್ನು ತಡೆಯಲು ಬೆಂಗಳೂರು ಪೊಲೀಸರು ಈ ಪ್ರಮುಖ ಕಾರ್ಯಾಚರಣೆಗಳನ್ನು ನಡೆಸಿದ್ದಾರೆ. ಆಂಧ್ರಪ್ರದೇಶದಿಂದ ಈ ರಕ್ತಚಂದನವನ್ನು ಅಕ್ರಮವಾಗಿ ಸಂಗ್ರಹಿಸಿ, ಹೆಚ್ಚಿನ ಬೆಲೆಗೆ ಮಾರಾಟ ಮಾಡುವ ಸಲುವಾಗಿ ತಮಿಳುನಾಡು ಅಥವಾ ಇತರೆಡೆಗೆ ಸಾಗಿಸಲಾಗುತ್ತಿತ್ತು ಎಂದು ತನಿಖೆಯಿಂದ ತಿಳಿದುಬಂದಿದೆ. ಈ ಬಗ್ಗೆ ಪೊಲೀಸರು ತೀವ್ರ ತನಿಖೆ ಕೈಗೊಂಡಿದ್ದು, ಮುಂದಿನ ಕ್ರಮ ಏನು ಎಂಬುದನ್ನ ಕಾದು ನೋಡಬೇಕಿದೆ.

## ₹18.75 ಕೋಟಿ ಮೌಲ್ಯದ ಮಾದಕವಸ್ತು ಜಪ್ತಿ: 10 ಮಂದಿ ಅರೆಸ್ಟ್



**ಬೆಂಗಳೂರು:** ಸಿಲಿಕಾನ್ ಸಿಟಿಗೆ ಅಂಟಿಕೊಂಡಿರುವ ಡ್ರಗ್ಸ್ (Drugs) ಪೆಡಂಭೂತವನ್ನು ತೊಲಗಿಸಲು ಬೆಂಗಳೂರು ಪೊಲೀಸರು ನಿರಂತರ ಕಾರ್ಯಾ ಚರಣೆಗಳನ್ನು ನಡೆಸುತ್ತಿದ್ದಾರೆ. ಹೊಸ ವರ್ಷದ ಸಂಭ್ರಮಾಚರಣೆ ಮತ್ತು ಪಾರ್ಟಿಗಳಿಗೆಂದು ಡ್ರಗ್ಸ್ ಪೂರೈಕೆ ಮಾಡಲು ಸಿದ್ಧವಾಗಿದ್ದ ಅಂತರರಾಜ್ಯ ಮತ್ತು ಅಂತರರಾಷ್ಟ್ರೀಯ ಮಾದಕವಸ್ತು ಜಾಲದ ಮೇಲೆ ಪೊಲೀಸರು ಬೃಹತ್ ದಾಳಿ ನಡೆಸಿದ್ದಾರೆ.

ಭರ್ಜರಿ ಕಾರ್ಯಾಚರಣೆ ನಡೆಸಿರುವ ಬೆಂಗಳೂರು ಪೊಲೀಸರು ನಗರದಾದ್ಯಂತ ಒಟ್ಟು ₹18.75 ಕೋಟಿ ರೂಪಾಯಿ ಮೌಲ್ಯದ ವಿವಿಧ ಮಾದಕವಸ್ತುಗಳನ್ನು ಜಪ್ತಿ ಮಾಡಿದ್ದಾರೆ. ಈ ಸಂಬಂಧ ಐದು ಪ್ರತ್ಯೇಕ ಪ್ರಕರಣಗಳನ್ನು ದಾಖಲಿಸಿ, ಒಟ್ಟು 10 ಮಂದಿ ಆರೋಪಿಗಳನ್ನು ಬಂಧಿಸಲಾಗಿದೆ. ವಶಪಡಿಸಿಕೊಂಡ ಮಾದಕವಸ್ತುಗಳಲ್ಲಿ ಮುಖ್ಯವಾಗಿ ಹೈಡ್ರೋ ಗಾಂಜಾ, ಸಾಮಾನ್ಯ ಗಾಂಜಾ ಮತ್ತು ಎಂಡಿಎಂಎ ಸೇರಿವೆ.

₹18.60 ಕೋಟಿ ಮೌಲ್ಯದ ಹೈಡ್ರೋ ಗಾಂಜಾ ವಶ: ಬ್ಯಾಂಕಾ ಕ್‌ನಿಂದ ಸಾಗಾಟ

ಬೆಂಗಳೂರಿನಲ್ಲಿ ನಡೆದ ಅತ್ಯಂತ ದೊಡ್ಡ ಪ್ರಮಾಣದ ಡ್ರಗ್ಸ್ ಜಪ್ತಿ ಪ್ರಕರಣ ಇದಾಗಿದ್ದು, ಮಹಾಲಕ್ಷ್ಮಿ ಲೇಔಟ್ ಠಾಣೆ ಪೊಲೀಸರು ಈ ಯಶಸ್ವಿ ಕಾರ್ಯಾಚರಣೆ ನಡೆಸಿದ್ದಾರೆ. ವಶಪಡಿ ಸಿಕೊಂಡ ಪ್ರಮಾಣ ಮತ್ತು ಮೌಲ್ಯ: ಪೊಲೀಸರು ಬರೋಬ್ಬರಿ 18 ಕೆ.ಜಿ. 590 ಗ್ರಾಂ ಹೈಡ್ರೋ ಗಾಂಜಾವನ್ನು ಜಪ್ತಿ ಮಾಡಿದ್ದಾರೆ. ಇದರ ಅಂದಾಜು ಮೌಲ್ಯವೇ ₹18.60 ಕೋಟಿ ರೂಪಾಯಿಗಳು.

ಸಾಗಾಟದ ಮೂಲ: ಈ ದುಬಾರಿ ಮಾದಕವಸ್ತುವನ್ನು ಬ್ಯಾಂಕಾಕ್‌ನಿಂದ ವಿಮಾನದ ಮೂಲಕ ಬೆಂಗಳೂರಿಗೆ ಸಾಗಿಸಲಾಗಿತ್ತು.

ಬಂಧನ: ಏರ್‌ಪೋರ್ಟ್ ನಿಂದ ಡ್ರಗ್ಸ್ ವಸ್ತುವನ್ನು ಹೊರಬರುತ್ತಿದ್ದಾಗ ಪೊಲೀಸರು ದಾಳಿ ನಡೆಸಿದರು. ಈ ಪ್ರಕರಣದಲ್ಲಿ ಒಟ್ಟು ಇಬ್ಬರನ್ನು ಬಂಧಿಸಲಾಗಿದೆ, ಇವರಲ್ಲಿ ಒಬ್ಬ ಪುರುಷ ಮತ್ತು ಒಬ್ಬ ಮಹಿಳೆ ಸೇರಿದ್ದಾರೆ. ತನಿಖೆ ವೇಳೆ ಬಂಧಿತರು ಮಾದಕವಸ್ತುವನ್ನ ಒಬ್ಬರಿಂದ ಮತ್ತೊಬ್ಬರುಗೆ ಸಾಗಾಟ ಮಾಡುತ್ತಿದ್ದರು ಎಂದು ತಿಳಿದುಬಂದಿದೆ. ಈ ಜಾಲದ ಹಿಂದೆ ಇರುವ ಪ್ರಮುಖ ಆರೋಪಿಗಳು ಮತ್ತು ಪೆಡ್ಲರ್‌ಗಳ ಪತ್ತೆಗಾಗಿ ಪೊಲೀಸರು ಶೋಧ ಕಾರ್ಯವನ್ನು ಮುಂದುವರಿಸಿದ್ದಾರೆ.

ಆರ್‌ಎಂಸಿ ಯಾರ್ಡ್ ಕಾರ್ಯಾಚರಣೆ: ಖಚಿತ ಮಾಹಿತಿ ಆಧರಿಸಿ ಕಾರ್ಯನಿರ್ವಹಿಸಿದ ಆರ್‌ಎಂಸಿ ಯಾರ್ಡ್ ಪೊಲೀಸರು, ಬ್ಯಾಗ್‌ನಲ್ಲಿ ಗಾಂಜಾ ತಂದು ಮಾರಾಟ ಮಾಡಲು ಯತ್ನಿಸುತ್ತಿದ್ದ ಓರ್ವ ಆರೋಪಿಯನ್ನು ಬಂಧಿಸಿದ್ದಾರೆ. ಆತನಿಂದ 8 ಕೆ.ಜಿ. 350 ಗ್ರಾಂ ಗಾಂಜಾ ವನ್ನು ವಶಪಡಿಸಿಕೊಳ್ಳಲಾಗಿದ್ದು, ಇದರ ಮೌಲ್ಯ ₹8.35 ಲಕ್ಷ ಎಂದು ಅಂದಾಜಿಸಲಾಗಿದೆ.

ಆರ್.ಟಿ ನಗರ ಕಾರ್ಯಾಚರಣೆ: ಆರ್.ಟಿ ನಗರ ಪೊಲೀಸರು ಮೈದಾನವೊಂದರಲ್ಲಿ ಡ್ರಗ್ಸ್ ಮಾರಾಟಕ್ಕೆ ಯತ್ನಿಸುತ್ತಿದ್ದ ಐವರು ಆರೋಪಿಗಳನ್ನು ಬಂಧಿಸಿದ್ದಾರೆ. ದಾಳಿಯ ವೇಳೆ ಬಂಧಿತರಿಂದ 5 ಕೆ.ಜಿ. 437 ಗ್ರಾಂ ಗಾಂಜಾವನ್ನು ಜಪ್ತಿ ಮಾಡಲಾಗಿದೆ. ಇದರ ಅಂದಾಜು ಮೌಲ್ಯ ₹5.43 ಲಕ್ಷ.

## ಫ್ರೀಡಂ ಪಾರ್ಕ್‌ಗೆ ತಾತ್ಕಾಲಿಕ ಬೀಗ: ಬೆಂಗಳೂರಿನ ಪ್ರತಿಭಟನಾ ಕೇಂದ್ರ ಬಂದ್

**ಬೆಂಗಳೂರು:** ಕರ್ನಾಟಕದ ರಾಜಧಾನಿ ಬೆಂಗಳೂರು ಎಂದ ಕೂಡಲೇ, ವಿವಿಧ ಬೇಡಿಕೆಗಳಿಗಾಗಿ ರಾಜ್ಯದ ನಾನಾ ಮೂಲೆಯಿಂದ ಬರುವ ಹೋರಾಟ ಗಾರರು ನೆನಪಾಗುತ್ತಾರೆ. ಈ ಎಲ್ಲ ಹೋರಾಟಗಳಿಗೆ ಏಕೈಕ ಕೇಂದ್ರಬಿಂದುವಾಗಿದ್ದ ಸ್ಥಳವೆಂದರೆ, ನಗರದ ಹೃದಯ ಭಾಗದಲ್ಲಿರುವ ಫ್ರೀಡಂ ಪಾರ್ಕ್. ಆದರೆ, ಇದೀಗ ಈ ಐತಿಹಾಸಿಕ ಆವರಣಕ್ಕೆ ತಾತ್ಕಾಲಿಕವಾಗಿ ಬೀಗ ಜಡಿಯಲಾಗಿದೆ. ಸಾರ್ವಜನಿಕರು ಮತ್ತು ಹೋರಾಟಗಾರರಿಗೆ ಪ್ರವೇಶವನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವತಿಯಿಂದ 'ಬ್ರ್ಯಾಂಡ್ ಬೆಂಗಳೂರು' ಹೆಸರಿನಡಿ ಈ ಫ್ರೀಡಂ ಪಾರ್ಕ್‌ನಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಂಡಿರುವ ಕಾರಣದಿಂದಾಗಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಸುಮಾರು 22 ಎಕರೆಗಳಷ್ಟು ವಿಶಾಲವಾದ ಜಾಗದಲ್ಲಿ ಹರಡಿರುವ ಈ ಪಾರ್ಕ್‌ನ ಒಳಗಿನ ಭಾಗವನ್ನು ಸಂಪೂರ್ಣವಾಗಿ ಮುಚ್ಚಲಾಗಿದೆ. ಸಾರ್ವಜನಿಕ ಪ್ರವೇಶವನ್ನು ನಿಷೇಧಿಸಿರುವುದರಿಂದ, ಬೆಂಗಳೂರಿನ ನಾಗರಿಕರು ಹಾಗೂ ಹೋರಾಟಗಾರರಿಗೆ ತೀವ್ರ ಸಮಸ್ಯೆ ಉಂಟಾಗಿದೆ. ಫ್ರೀಡಂ ಪಾರ್ಕ್ ಮೂಲತಃ ಹಳೆಯ ಕೇಂದ್ರ ಕಾರಾಗೃಹದ ಜಾಗವಾಗಿತ್ತು. 2008 ರಲ್ಲಿ ಇದನ್ನು ಸಾರ್ವಜನಿಕರಿಗೆ ಮುಕ್ತಗೊಳಿಸಲಾಯಿತು ಮತ್ತು ಹೋರಾಟಗಳಿಗೆ ಮೀಸಲಾದ ಜಾಗವನ್ನಾಗಿ ಘೋಷಿಸಲಾಯಿತು. ಇಲ್ಲಿನ ವಾಕರ್ಸ್ ಟ್ರ್ಯಾಕ್, ಹಸಿರು ಪರಿಸರವು ನಡಿಗೆದಾರರಿಗೂ ನೆಚ್ಚಿನ ತಾಣವಾಗಿತ್ತು. ಇದೀಗ ಪಾರ್ಕ್ ಬಂದ್ ಆಗಿರುವುದರಿಂದ, ಪ್ರತಿದಿನ ಬೆಳಗಿನ ಮತ್ತು ಸಂಜೆಯ ನಡಿಗೆಗಾಗಿ ಬರುತ್ತಿದ್ದ ನೂರಾರು ನಡಿಗೆದಾರರು ಪರ್ಯಾಯ ಜಾಗ ಹುಡುಕುವಂತಾಗಿದೆ.

ಗ್ರೇಟರ್ ಬೆಂಗಳೂರು ಪ್ರಾಧಿಕಾರವು ಅಂದಾಜು ₹5 ಕೋಟಿ ವೆಚ್ಚದಲ್ಲಿ ಪಾರ್ಕ್‌ನಲ್ಲಿ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸುವ ಕಾರ್ಯವನ್ನು ಆರಂಭಿಸಿದೆ. ಈ ಕಾಮಗಾರಿಗಳಲ್ಲಿ ಮುಖ್ಯವಾಗಿ ಹೋರಾಟ ಗಾರರಿಗೆ ಅನುಕೂಲವಾಗುವಂತೆ ಉತ್ತಮ ಶೌಚಾಲಯ ವ್ಯವಸ್ಥೆ ಮತ್ತು ಇತರೆ ಸೌಲಭ್ಯಗಳನ್ನು ನಿರ್ಮಿಸಲಾಗುತ್ತಿದೆ. ಕಾಮಗಾರಿಗಳು ವೇಗವಾಗಿ ಸಾಗಿದ್ದರೂ, ಸದ್ಯಕ್ಕೆ ವಿದ್ಯುತ್ ಸಂಪರ್ಕ ಕಡಿತಗೊಂಡಿದೆ ಮತ್ತು ನೀರಿನ ಸೌಲಭ್ಯವೂ ಲಭ್ಯವಿಲ್ಲವಾಗಿದೆ ಎಂದು ವರದಿಯಾಗಿದೆ.

ಸಾಮಾನ್ಯವಾಗಿ ಫ್ರೀಡಂ ಪಾರ್ಕ್‌ನ ಹೊರಭಾಗದಲ್ಲಿ ಪ್ರತಿಭಟನೆ ನಡೆಸಲು ಪೊಲೀಸರು ಅವಕಾಶ ನೀಡುತ್ತಿದ್ದರು. ಆದರೆ, ಪಾರ್ಕ್ ಬಂದ್ ಆದ ಕಾರಣದಿಂದಾಗಿ ಪ್ರತಿಭಟನಾಕಾರರು ಈಗ ಪಾರ್ಕ್‌ನ ಹೊರಗೆ ನಿಂತು ಪ್ರತಿಭಟನೆ ನಡೆಸುತ್ತಿದ್ದಾರೆ. ಇದರಿಂದ ಸಾರ್ವಜನಿಕ ಸಂಚಾರಕ್ಕೆ ಅಡಚಣೆಯಾಗುವ ಸಾಧ್ಯತೆ ಇದೆ. ಆದ್ದರಿಂದ, ಹೊರಭಾಗದಲ್ಲಿ ಪ್ರತಿಭಟನೆ ನಡೆಸದಂತೆ ತಡೆಯುವಂತೆ ಪೊಲೀಸರಿಗೆ ಮನವಿ ಮಾಡಲಾಗಿದೆ.

ಈ ವಾರದಲ್ಲಿ ಪಾರ್ಕ್‌ನ ಹೊರಗೂ ಸಹ ಪ್ರತಿಭಟನೆಗೆ ಅವಕಾಶ ಕೊಡದಿರಲು ಚಿಂತನೆ ನಡೆಯುತ್ತಿದೆ ಎನ್ನಲಾಗಿದೆ. ಅಭಿವೃದ್ಧಿ ಕಾಮಗಾರಿಗಳು ಪೂರ್ಣಗೊಂಡ ನಂತರ ಫ್ರೀಡಂ ಪಾರ್ಕ್ ಅನ್ನು ಮತ್ತಷ್ಟು ಉತ್ತಮ ರೀತಿಯಲ್ಲಿ ಸಾರ್ವಜನಿಕ ಬಳಕೆಗೆ ಮುಕ್ತಗೊಳಿಸಲಾಗುತ್ತದೆ. ಹೋರಾಟಗಾರರು ತಮ್ಮ ಬೇಡಿಕೆಗಳನ್ನು ಪ್ರಸ್ತುತಪಡಿಸಲು, ಸಾರ್ವಜನಿಕರು ವಾಕಿಂಗ್ ಮಾಡಲು, ಚಲನಚಿತ್ರಗಳ ಚಿತ್ರೀಕರಣಕ್ಕೆ, ಮತ್ತು ಇತರೆ ಸಾರ್ವಜನಿಕ ಉದ್ದೇಶಗಳಿಗೆ ವ್ಯವಸ್ಥಿತವಾಗಿ ಅವಕಾಶ ಕಲ್ಪಿಸಲು ತೀರ್ಮಾನ ಮಾಡಲಾಗಿದೆ ಅಧಿಕಾರಿಗಳು ತಿಳಿಸಿದ್ದಾರೆ.

ಒಟ್ಟಾರೆಯಾಗಿ, ಫ್ರೀಡಂ ಪಾರ್ಕ್‌ನ ಈ ತಾತ್ಕಾಲಿಕ ಬಂದ್ ನಿರ್ಧಾರದಿಂದಾಗಿ ಹೋರಾಟಗಾರರು ಮತ್ತು ಸಾರ್ವಜನಿಕರು ಎರಡೂ ಕಡೆಯಿಂದ ತೀವ್ರ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. 'ಬ್ರ್ಯಾಂಡ್ ಬೆಂಗಳೂರು' ಹೆಸರಿನಡಿ ಅಭಿವೃದ್ಧಿ ನಡೆಯುತ್ತಿದ್ದರೂ, ಅದು ಆದಷ್ಟು ಬೇಗ ಪೂರ್ಣಗೊಂಡು ಪಾರ್ಕ್ ಮತ್ತೆ ತೆರೆಯಬೇಕು ಎಂಬುದು ಸಾರ್ವಜನಿಕರ ಆಗ್ರಹವಾಗಿದೆ.

## ಕಮಿಷನರ್ ಕಚೇರಿ ಆವರಣದಲ್ಲೇ ಹಣ ದೋಚಿದ ಪೊಲೀಸಪ್ಪ



**ಬೆಂಗಳೂರು:** ಸಿದ್ದಾಪುರ ದರೋಡೆ ಪ್ರಕರಣ ಮಾಸುವ ಮುನ್ನವೇ ಮತ್ತೊಬ್ಬ ಪೊಲೀಸ್ ಸಿಬ್ಬಂದಿಯ ಮೇಲೆ ಕಳ್ಳತನ ಆರೋಪ ಬಂದಿದೆ. ಪೊಲೀಸ್ ಆಯುಕ್ತರ ಕಚೇರಿಯ ಆವರಣದಲ್ಲಿಯೇ ಕಳ್ಳತನ ನಡೆದಿದೆ. ಸೈಬರ್ ಪ್ರಕರಣದ ಆರೋಪಿಯನ್ನ ವಿಚಾರಣೆಗೆ ಕರೆತಂದಾಗ ಆತನ ಕಾರಿನಲ್ಲಿ 11 ಲಕ್ಷ ಹಣದ ಬ್ಯಾಗ್ ಅನ್ನು ಹೆಡ್ ಕಾನ್ಸ್‌ಟೇಬಲ್ ಜಬೀವುಲ್ಲಾ ಕದ್ದಿರುವ ಆರೋಪ ಕೇಳಿಬಂದಿದೆ. ಹಣ ಕಳ್ಳತನ ಮಾಡಿ ಏನು ಗೊತ್ತೇ ಇಲ್ಲ ಎನ್ನುವಂತೆ ಜಬೀವುಲ್ಲಾ ಕೆಲಸ ಮಾಡ್ತಿದ್ದನಂತೆ.

ಇತ್ತ ಆರೋಪಿ ಬಂಧಿಸಿದ್ದ ಇನ್ಸ್‌ಕ್ಟರ್ ಉಮೇಶ್ ಅಂಡ್ ಟೀಂ ಆತನನ್ನ ಜೈಲಿಗಟ್ಟಿತ್ತು. ಬಳಿಕ ಜಾಮೀನು ಪಡೆದು ಹೊರಬಂದ ಆರೋಪಿ ತನ್ನ ಕಾರಿನಲ್ಲಿ ಇದ್ದ ಹಣದ ಬ್ಯಾಗ್ ನಾಪತ್ತೆ ಆಗಿರುವುದನ್ನ ನೋಡಿ ಈ ಬಗ್ಗೆ ಸೈಬರ್ ಪೊಲೀಸರ ಬಳಿ ಪ್ರಶ್ನೆ ಮಾಡಿದ್ದಾನೆ. ಆರೋಪಿಯ ಪ್ರಶ್ನೆಗೆ ಗಾಬರಿಗೊಂಡು ಪರಿಶೀಲನೆ ಮಾಡಿದಾಗ ಕಾರಿನಲ್ಲಿದ್ದ ಹಣವನ್ನ ಜಬೀವುಲ್ಲಾ ತೆಗೆದುಕೊಂಡು ಹೋಗಿರೋದು ಗೊತ್ತಾಗಿದೆ. ಸಿಸಿಟಿವಿ ಕ್ಯಾಮೆರಾದಲ್ಲಿ ಜಬೀವುಲ್ಲಾ ಹಣದ ಬ್ಯಾಗ್ ಕಳ್ಳತನ ಮಾಡಿರುವುದು ಗೊತ್ತಾಗಿದೆ. ಇತ್ತ ಸುಮಾರು 11 ಲಕ್ಷ ಹಣ ಕಳ್ಳತನ ಮಾಡಿ ಹೆಡ್ ಕಾನ್ಸ್ಟೆಬಲ್ ಜಬಿವುಲ್ಲಾ ಆರಾಮಾಗಿ ಓಡಾಡಿಕೊಂಡಿದ್ದ. ಘಟನೆಯ ಬಗ್ಗೆ ಸಿಸಿಬಿ ಡಿಸಿಪಿ ರಾಜಾ ಇಮಾಮ್ ಖಾಸಿಂಗೆ ಹಣ ಕಳೆದುಕೊಂಡ ವ್ಯಕ್ತಿ ದೂರು ನೀಡಿದ್ರು. ದೂರು ಪಡೆದುಕೊಂಡು ಕಾನ್ಸ್‌ಟೇಬಲ್ ಜಬೀವುಲ್ಲಾ ಮನೆ ಸರ್ಚ್ ಮಾಡಲು ತೆರಳಿದಾಗ ಮನೆಯ ಬಳಿ ಜಬೀವುಲ್ಲಾ ಹೈಡ್ರಾಮಾ ಮಾಡಿದ್ದಾನೆ. ಮನೆಯ ಒಳಗೆ ಸೈಬರ್ ಪೊಲೀಸರನ್ನ ಬಿಡದೆ ಗಲಾಟೆ ಮಾಡಿದ್ದಾನೆ. ಕೊನೆಗೆ ಜಬೀವುಲ್ಲಾನನ್ನ ತಡೆದು ಮನೆ ಸರ್ಚ್ ಮಾಡಿದಾಗ ತನ್ನ ಕೋಣೆಯ ಬೆಡ್ ಕೆಳಗೆ ಲಕ್ಷ ಲಕ್ಷ ಹಣ ಜೋಡಿಸಿಟ್ಟಿದ್ದು ಬಯಲಾಗಿದೆ.

ಅಲ್ಲದೇ ಕದ್ದ ಹಣದಿಂದಲೇ ಪತ್ನಿಗೆ ಒಡವೆಗಳನ್ನೂ ಕೊಡಿಸಿದ್ದ ಅನ್ನೋದು ಕಂಡುಬಂದಿದೆ. ಸದ್ಯ ಹೆಡ್ ಕಾನ್ಸ್‌ಟೇಬಲ್ ಜಬಿವುಲ್ಲಾ 2 ಲಕ್ಷ ರೂ. ಹಣ ವಾಪಸ್ ಕೊಟ್ಟಿದ್ದಾನೆ. ಉಳಿದ ಹಣ ವಾಪಸ್ ಕೊಡುವಂತೆ ಹಿರಿಯ ಅಧಿಕಾರಿಗಳು ತಾಕೀತು ಮಾಡಿದ್ದಾರೆ.ಈಗಾಗಲೇ ಸಿದ್ದಾಪುರ ದರೋಡೆ ಕೇಸ್‌ನಲ್ಲಿ ಪೊಲೀಸ್ ಕಾನ್ಸ್ ಟೇಬಲ್ ಅಣ್ಣಪ್ಪ ನಾಯಕ್ ಬಂಧನವಾಗಿದ್ರೆ, ಜೆ.ಪಿ ನಗರದಲ್ಲಿ ಸೀನಿಯರ್ ಸಿಟಿಜನ್ ಬಳಿ ಹಣಪಡೆದ ಹಿನ್ನೆಲೆ ಇಬ್ಬರ ಅಮಾನತು ಮಾಡಲಾಗಿತ್ತು. ಬೆಳ್ಳಂದೂರು ಪೊಲೀಸರ ಮೇಲೆ ಸಾವಿನಲ್ಲೂ ಹಣ ಪಡೆದ ಆರೋಪ ಬಂದಿತ್ತು. ಇದೀಗ ಸೈಬರ್ ಠಾಣೆಯ ಸಿಬ್ಬಂದಿ ಹೆಡ್ ಕಾನ್ಸ್‌ಟೇಬಲ್ ಜಬಿವುಲ್ಲಾ ಮೇಲೆ ಕಳ್ಳತನದ ಆರೋಪ ಬಂದಿದ್ದು, ದೂರು ಪಡೆದಿರುವ ಪೊಲೀಸರಿಂದ ಪ್ರಕರಣ ಮುಚ್ಚಿ ಹಾಕಲು ಯತ್ನ ನಡೆದಿದೆ ಅನ್ನೊ ಆರೋಪ ಸಹ ಕೇಳಿ ಬಂದಿದೆ

## ಮಿಡಲ್ ಫಿಂಗರ್ ತೋರಿಸಿ ಶಾರುಕ್ ಮಗ ಅಸಭ್ಯ ವರ್ತನೆ

**ಬೆಂಗಳೂರು: ಬಾಲಿವುಡ್ ಸೂಪರ್‌ಸ್ಟಾರ್ ಶಾರೂಖ್ ಖಾನ್ ಅವರ ಹಿರಿಯ ಪುತ್ರ ಆರ್ಯನ್ ಖಾನ್ ಮತ್ತೊಮ್ಮೆ ಸುದ್ದಿಯಲ್ಲಿದ್ದಾರೆ. ಈ ಬಾರಿ ಬೆಂಗಳೂರಿನ ಒಂದು ಹೈ-ಎಂಡ್ ಪಬ್‌ನಲ್ಲಿ ಸಾರ್ವಜನಿಕ ವಾಗಿ ಮಿಡಲ್ ಫಿಂಗರ್ ತೋರಿಸಿದ್ದಾರೆ. ಈ ಘಟನೆಯ ವೀಡಿಯೊ ಕೆಲವೇ ಗಂಟೆ ಗಳಲ್ಲಿ ಸೋಶಿಯಲ್ ಮೀಡಿಯಾ ಗಳಲ್ಲಿ ವೈರಲ್ ಆಗಿ, ಟೀಕೆಗೆ ಗುರಿಯಾಗಿದೆ.**




**ವೀಡಿಯೊದಲ್ಲಿ ಆರ್ಯನ್ ಖಾನ್ ತಮ್ಮ ಸ್ನೇಹಿತರೊಂದಿಗೆ ಪಬ್‌ನಿಂದ ಹೊರ ಬರುತ್ತಿರುವುದು ಕಂಡುಬಂದಿದೆ. ಹೊರಗೆ ಕಾಯುತ್ತಿದ್ದ ಅಭಿಮಾನಿಗಳು ಮತ್ತು ಪಾಪರಾಜಿಗಳು ಫೋಟೋ-ವೀಡಿಯೊ ತೆಗೆದಿದ್ದಾರೆ. ಆ ವೇಳೆ ಆರ್ಯನ್ ಕೈ ಬೀಸಿದ ನಂತರ ಮಿಡಲ್ ಫಿಂಗರ್ ತೋರಿಸುತ್ತಾರೆ.**

## ಮುದ್ದಾದ ಮಕ್ಕಳೇ ಇವಳ ಟಾರ್ಗೆಟ್; 2 ವರ್ಷದಲ್ಲಿ ನಾಲ್ಕು ಮಕ್ಕಳ ಕೊಲೆ

**ಚಂಡೀಗಢ:** ಹರಿಯಾಣದ ಮಹಿಳೆಯೊಬ್ಬಳಿಗೆ ತನಗಿಂತ ಯಾರು ಕೂಡ ಸುಂದರವಾಗಿ ಕಾಣಬಾರದು. ಹಾಗೇನಾದ್ರು, ಚೆನ್ನಾಗಿ ಕಂಡರೆ ಅವರ ಕಥೆ ಮುಗೀತು. ಇವರು ನನಗಿಂತ ಸುಂದರವಾಗಿದ್ದಾರೆ ಅಂತ ಮಕ್ಕಳನ್ನು ಈಕೆ ಕ್ರೂರವಾಗಿ ಕೊಂದಿದ್ದಾಳೆ. ಹೆತ್ತ ಮಗನನ್ನೂ ಹತ್ಯೆಗೈದಿದ್ದಾಳೆ. ಈಕೆಯ ಕೊಲೆ ಪ್ರಸಂಗ ನಿಜಕ್ಕೂ ಅಚ್ಚರಿ ಜೊತೆಗೆ ಆತಂಕ ಮೂಡಿಸುವಂತಿದೆ. ಪೂನಂ ನಾಲ್ಕು ಮಕ್ಕಳನ್ನು ಹತ್ಯೆ ಮಾಡಿದ ಮಹಿಳೆ. ಈಕೆ 2021ರಿಂದ ತನ್ನ ಕುಕೃತ್ಯವನ್ನು ಪಾಲಿಸಿಕೊಂಡು ಬಂದಿದ್ದಾಳೆ. ಕೆಲದಿನಗಳ ಹಿಂದಷ್ಟೇ ತನ್ನ ಸೋದರ ಸಂಬಂಧಿ ಮಗಳನ್ನು ಹತ್ಯೆ ಮಾಡಿ ಪೊಲೀಸರ ಬಲೆಗೆ ಬಿದ್ದಿದ್ದಾಳೆ. ಕುಟುಂಬದ ಕಾರ್ಯಕ್ರಮಕ್ಕಾಗಿ ಪೂನಂ ಹೋಗಿರುತ್ತಾಳೆ. ಅಲ್ಲಿ ಸೋದರ ಸಂಬಂಧಿ ಮಗಳನ್ನು ನೀರಿನ ತೊಟ್ಟಿಯಲ್ಲಿ ಮುಳುಗಿಸಿ ಹತ್ಯೆ ಮಾಡ್ತಾಳೆ. ಕಳೆದ ನಾಲ್ಕು ವರ್ಷಗಳಲ್ಲಿ ಪೂನಂ ತನ್ನ ನಾಲ್ಕು ವರ್ಷದ ಮಗ ಸೇರಿದಂತೆ ಇತರ ಮೂವರು ಮಕ್ಕಳನ್ನು ಕೊಂದಿದ್ದಾಳೆ ಎಂದು ಆರೋಪಿಸಲಾಗಿದೆ. ನಾಲ್ಕು ಮಕ್ಕಳಲ್ಲಿ ಮೂವರು ಚಿಕ್ಕ ಹುಡುಗಿಯರಾಗಿದ್ದರು. ಅಂದರೆ, ಹುಡುಗಿಯರು ತನಗಿಂತ 'ಹೆಚ್ಚು ಸುಂದರ' ಎಂಬ ಕಾರಣಕ್ಕಾಗಿ ಪೂನಂ ಅವರನ್ನು ಕೊಂದಿದ್ದಾಳೆ. ಅವಳು ತನ್ನ ಮಗನನ್ನು ಏಕೆ ಕೊಂದಳು ಎಂಬುದು ಸ್ಪಷ್ಟವಾಗಿಲ್ಲ. 2023 ರಲ್ಲಿ ತನ್ನ ಅತ್ತಿಗೆಯ ಒಂಬತ್ತು ವರ್ಷದ ಮಗು ಇಶಿಕಾಳನ್ನು ಮೊದಲ ಬಾರಿ ಕೊಲೆ ಮಾಡಿದ್ದಾಳೆ. 2023ರಲ್ಲಿ ಶುಭಂನನ್ನು ಹತ್ಯೆ ಮಾಡಿದ್ದಳು. ಇದು ಎರಡನೇ ಕೊಲೆಯಾಗಿತ್ತು. ಮೂರನೆಯವಳು ಎಂಟು ವರ್ಷದ ಜಿಯಾ. ನಾಲ್ಕನೆಯವಳು ವಿಧಿ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಹೊಸ ವರ್ಷಕ್ಕೆ ಮೆಟ್ರೊ ಪ್ರಯಾಣಿಕರಿಗೆ ಗುಡ್ ನ್ಯೂಸ್..



**ಬೆಂಗಳೂರು:** ಮೆಟ್ರೊ ಹಳದಿ ಮಾರ್ಗದ (ಯೆಲ್ಲೋ ಲೈನ್) ಸೇವಾ ಆವರ್ತನವನ್ನು ಹೆಚ್ಚಿಸಲು , ಆರನೇ ಡ್ರೈವರ್‌ಲೆಸ್ ಮೆಟ್ರೊ ರೈಲು ಸೆಟ್ ಇಂದು ಸಂಜೆ ಬೆಂಗಳೂರಿನ ಹೆಬ್ಬಗೋಡಿ ಡಿಪೋಗೆ ಸುರಕ್ಷಿತವಾಗಿ ತಲುಪಿದೆ. ಕೊಲ್ಕತ್ತಾದ ಟಿಟಾಗರ್ ನಿಂದ ನವೆಂಬರ್ 18ರಂದು ಪ್ರಯಾಣವನ್ನು ಆರಂಭಿಸಿದ ಈ ಹೊಸ ರೈಲು ಸೆಟ್,ಇಂದು ಬೆಂಗಳೂರಿಗೆ ತಲುಪಿದೆ.

ಪ್ರಯಾಣ ಸೌಲಭ್ಯಕ್ಕೆ ಹೊಸ ಚಾಲನೆ

ಸದ್ಯದಲ್ಲಿ, ಆರ್.ವಿ. ರೋಡ್ ನಿಂದ ಬೊಮ್ಮಸಂದ್ರದವರೆಗೆ 19.15 ಕಿಮೀ ದೂರವನ್ನು ಒಳಗೊಂಡಿರುವ ಹಳದಿ ಮಾರ್ಗದಲ್ಲಿ ಕೇವಲ ಐದು ರೈಲು ಸೆಟ್‌ಗಳು ಸಂಚರಿಸುತ್ತಿದ್ದು, ರೈಲುಗಳ ನಡುವಿನ ಆವರ್ತನ ಸಮಯ 15 ರಿಂದ 18 ನಿಮಿಷಗಳಷ್ಟು ದೀರ್ಘವಾ ಗಿದೆ. ಇದರಿಂದಾಗಿ ಪ್ರಯಾಣಿಕರು ಆಗಾಗ್ಗೆ ತೊಂದರೆ ಅನುಭವಿಸುತ್ತಿದ್ದರು.

ಈ ಹೊಸ ಆರನೇ ರೈಲು ಸೆಟ್ ಡಿಸೆಂಬರ್ ಅಂತ್ಯದ ವೇಳೆಗೆ ವಾಣಿಜ್ಯಿಕ ಸೇವೆಯನ್ನು ಆರಂಭಿಸುವ ಮೂಲಕ, ರೈಲು ಆವರ್ತನವನ್ನು 10 ರಿಂದ 12 ನಿಮಿಷಗಳಿಗೆ ಇಳಿಸಲು ಬೆಂಗಳೂರು ಮೆಟ್ರೊ ರೇಲ್ ಕಾರ್ಪೊರೇಷನ್ ಲಿಮಿಟೆಡ್ (BM-RCL) ಯೋಜಿಸಿದೆ. ಇದು ಪ್ರಸ್ತುತ ಸೇವೆಯಲ್ಲಿ ಗಮನಾರ್ಹ ಸುಧಾರಣೆಯನ್ನು ತಂದು, ಪ್ರಯಾಣಿಕರಿಗೆ ಹೆಚ್ಚು ಸುಲಭ ಮತ್ತು ವೇಗವಾದ ಸಂಚಾರ ಅನುಭವವನ್ನು ನೀಡಲಿದೆ.

ಹೊಸ ವರ್ಷದ ಆರಂಭದಲ್ಲಿ ಮೆಟ್ರೊ ಸೇವೆಯನ್ನು ಇನ್ನಷ್ಟು ಉತ್ತಮಗೊಳಿಸಲು BMR-CL ಹೆಚ್ಚಿನ ಯೋಜನೆ ಹಾಕಿದೆ. ಡಿಸೆಂಬರ್ ಮತ್ತು ಜನವರಿ ತಿಂಗಳ ಆರಂಭದಲ್ಲಿ ಇನ್ನೂ ಎರಡು ಹೊಸ ಡ್ರೈವರ್‌ಲೆಸ್ ರೈಲು ಸೆಟ್‌ಗಳು ಟಿಟಾಗರ್ ನಿಂದ ಬೆಂಗಳೂರಿಗೆ ಆಗಮಿಸಲಿವೆ.

ಈ ಎಲ್ಲಾ ಹೊಸ ಸೇರ್ಪಡೆಗಳೊಂದಿಗೆ, 2026ರ ಆರಂಭದ ಹೊತ್ತಿಗೆ ಹಳದಿ ಮಾರ್ಗವು ಬೆಂಗಳೂರಿನ ಇತರ ಮುಖ್ಯ ಮೆಟ್ರೊ ಮಾರ್ಗಗಳಾದ ಹಸಿರು ಮತ್ತು ನೇರಳೆ ಮಾರ್ಗಗಳಂತೆಯೇ ಪ್ರತಿ 5 ನಿಮಿಷಗಳಿಗೊಮ್ಮೆ ರೈಲು ಸೇವೆಯನ್ನು ನೀಡುವ ಸಾಮರ್ಥ್ಯವನ್ನು ಪಡೆಯಲಿದೆ. ಇದು ನಗರದ ಉತ್ತರ-ದಕ್ಷಿಣ ಉದ್ದಕ್ಕೂ ಸಂಚಾರವನ್ನು ಪೂರ್ತಿಯಾಗಿ ರೂಪಾಂತರಿಸುವ ನಿರೀಕ್ಷೆಯಿದೆ.

ಹಳದಿ ಮೆಟ್ರೊ ಮಾರ್ಗವನ್ನು ಈ ವರ್ಷ ಆಗಸ್ಟ್ 10ರಂದು ಉದ್ಘಾಟಿಸಲಾಗಿದ್ದು, ಮರುದಿನ ಆಗಸ್ಟ್ 11ರಿಂದ ಸಾರ್ವಜನಿಕರಿಗೆ ವಾಣಿಜ್ಯಿಕ ಸೇವೆಯನ್ನು ಆರಂಭಿಸಲಾಗಿತ್ತು. ತನ್ನ ಸಂಪೂರ್ಣ ಸಾಮರ್ಥ್ಯದೊಂದಿಗೆ ಕಾರ್ಯನಿರ್ವಹಿಸಲು ಅಗತ್ಯವಿರುವ ರೈಲು ಬಂಡಿಗಳ ಸಂಖ್ಯೆಯನ್ನು ತಲುಪುವುದು, ಈ ಮಹತ್ವದ ನಗರ ಸಾರಿಗೆ ಯೋಜನೆಯ ಮುಂದಿನ ಪ್ರಮುಖ ಗುರಿಯಾಗಿದೆ. ಆರನೇ ರೈಲಿನ ಆಗಮನ ಮತ್ತು ಮುಂದಿನ ಸೇರ್ಪಡೆಗಳು ಈ ದಿಕ್ಕಿನಲ್ಲಿ ಒಂದು ಮಹತ್ವದ ಹೆಜ್ಜೆಯಾಗಿದೆ.

# ಮುಂಬರುವ ವಿಧಾನಸಭೆ ಚುನಾವಣೆಗೆ ಬಿವೈವಿ ನೇತೃತ್ವ ಬೇಡ



**ನವದೆಹಲಿ:** ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ ವಿಜಯೇಂದ್ರ ವಿರುದ್ಧ ಸಮರ ಸಾರಿದ್ದ ಭಿನ್ನ ನಾಯಕರು ಈಗ ತಮ್ಮ ಹೋರಾಟದ ದಾರಿಯನ್ನು ಬದಲಿಸಿದ್ದಾರೆ. ಕೂಡಲೇ ಬಿ.ವೈ ವಿಜಯೇಂದ್ರ ಅವರನ್ನು ಬದಲಿಸಲು ಒತ್ತಡ ಹೇರುವ ಬದಲು ಮುಂಬರುವ ವಿಧಾನಸಭೆ ಚುನಾವಣೆಗೆ ಅವರು ನೇತೃತ್ವ ವಹಿಸದಂತೆ ನೋಡಿಕೊಳ್ಳುವ ಪ್ರಯತ್ನ ಆರಂಭಿಸಿದ್ದಾರೆ. ಕಳೆದ ಮೂರ ದಿನಗಳಿಂದ ದೆಹಲಿಯಲ್ಲಿ ಬೀಡುಬಿಟ್ಟಿರುವ ಶಾಸಕ ರಮೇಶ್ ಜಾರಕಿಹೊಳಿ ನೇತೃತ್ವದ ಭಿನ್ನರ ತಂಡ ರಾಜ್ಯ ಬಿಜೆಪಿ ಉಸ್ತುವಾರಿ ರಾಧ ಮೋಹನ್ ದಾಸ್ ಅಗರವಾಲ್, ಕೇಂದ್ರ ಸಚಿವರಾದ ಹೆಚ್.ಡಿ ಕುಮಾರಸ್ವಾಮಿ, ವಿ. ಸೋಮಣ್ಣ , ಸಂಸದರಾದ ಬಸವರಾಜ್ ಬೊಮ್ಮಾಯಿ, ಡಾ.ಕೆ ಸುಧಾಕರ್ ಸೇರಿದಂತೆ ಹಲವರನ್ನು ಭೇಟಿ ಮಾಡಿದ್ದಾರೆ ಬಿಜೆಪಿ ಪ್ರತ್ಯೇಕ ಬಣದ ನಾಯಕರು ಹೈಕಮಾಂಡ್ ನಾಯಕರನ್ನು ಭೇಟಿಯಾಗಿ ತಮ್ಮ ಅಸಮಾಧಾನವನ್ನು ತೋಡಿಕೊಂಡಿದ್ದಾರೆ ಎಂದು ಉನ್ನತ ಮೂಲಗಳು ತಿಳಿಸಿವೆ.

ವಿಜಯೇಂದ್ರ ಪಕ್ಷದ ಹೋರಾಟಗಳನ್ನು ಸಮರ್ಪಕವಾಗಿ ನಡೆಸುತ್ತಿಲ್ಲ. ರಾಜ್ಯದ ಪ್ರಸಕ್ತ ಸಮಸ್ಯೆಗಳ ಬಗ್ಗ ತಲೆಕೆಡಿಸಿಕೊಳ್ಳುವುದಿಲ್ಲ. ಸಂಘಟನೆ ಬಲಪಡಿಸುವಲ್ಲಿ ವಿಫಲರಾಗಿದ್ದಾರೆ. ಮಾಧ್ಯಮ ಹೇಳಿಕೆಗಳ ಮಟ್ಟಕ್ಕೆ ಮಾತ್ರ ಸೀಮಿತವಾಗಿದ್ದಾರೆ ಎಂದು ರೆಬೆಲ್ ತಂಡ ಹೈಕಮಾಂಡ್ ನಾಯಕರ ಮುಂದೆ ಆಕ್ರೋಶ ವ್ಯಕ್ತಪಡಿಸಿದೆ ಎನ್ನಲಾಗಿದೆ ಬಿಜೆಪಿ ಪ್ರತ್ಯೇಕ ಬಣದ ನಾಯಕರು ಹೈಕಮಾಂಡ್ ನಾಯಕರನ್ನು ಭೇಟಿಯಾಗಿ ತಮ್ಮ ಅಸಮಾಧಾನವನ್ನು ತೋಡಿಕೊಂಡಿದ್ದಾರೆ ಎಂದು ಉನ್ನತ ಮೂಲಗಳು ತಿಳಿಸಿವೆ. ವಿಜಯೇಂದ್ರ ಪಕ್ಷದ ಹೋರಾಟಗಳನ್ನು ಸಮರ್ಪಕವಾಗಿ ನಡೆಸುತ್ತಿಲ್ಲ. ರಾಜ್ಯದ ಪ್ರಸಕ್ತ ಸಮಸ್ಯೆಗಳ ಬಗ್ಗೆ ತಲೆಕೆಡಿಸಿಕೊಳ್ಳುವುದಿಲ್ಲ. ಸಂಘಟನೆ ಬಲಪಡಿಸುವಲ್ಲಿ ವಿಫಲರಾಗಿದ್ದಾರೆ. ಮಾಧ್ಯಮ ಹೇಳಿಕೆಗಳ ಮಟ್ಟಕ್ಕೆ ಮಾತ್ರ ಸೀಮಿತವಾಗಿದ್ದಾರೆ ಎಂದು ರೆಬೆಲ್ ತಂಡ ಹೈಕಮಾಂಡ್ ನಾಯಕರ ಮುಂದೆ ಆಕ್ರೋಶ ವ್ಯಕ್ತಪಡಿಸಿದೆ ಎನ್ನಲಾಗಿದೆ ಇನ್ನು ದೆಹಲಿಯಲ್ಲಿ ರಾಜ್ಯಾಧ್ಯಕ್ಷರ ಬದಲಾವಣೆ ಹೋರಾಟದ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಪ್ರತ್ಯೇಕ ಬಣದ ನಾಯಕ ಕುಮಾರ್ ಬಂಗಾರಪ್ಪ, ಅದು ಕಳೆದ ಒಂದೂವರೆ ವರ್ಷದಿಂದ ನಡೆಯುತ್ತಿದೆ.

ಅದರ ಬಗ್ಗೆ ಪದೇಪದೆ ಮಾತಾಡುವ ಕೆಲಸಕ್ಕೆ ಹೋಗಿಲ್ಲ. ನಾವು ಪ್ರಸ್ತುತ ರಾಜಕೀಯದತ್ತ ಗಮನ ಹರಿಸುತ್ತಿದ್ದೇವೆ ಎಂದಿದ್ದಾರೆ. ಸಂಘಟನೆಯನ್ನು ಬೂತ್ ಮಟ್ಟದಿಂದ ರಾಜ್ಯ ಮಟ್ಟದವರೆಗೆ ಬಲಪಡಿಸಬೇಕು ಎಂದು ಅಮಿತ್ ಶಾ ಸೂಚನೆ ಇದೆ. ನಿಮ್ಮ ಬೂತ್ ಅನ್ನು ಬಲಪಡಿಸಿ, ನಿಮ್ಮ ಮಂಡಲವನ್ನು ಸಿದ್ಧಪಡಿಸಿಕೊಳ್ಳಿ. ರಾಷ್ಟ್ರ ನಿರ್ಮಾಣಕ್ಕೆ ಮಂಡಲ ಮತ್ತು ಬೂತ್ ಮುಖ್ಯವೇ ಹೊರತು, ರಾಷ್ಟ್ರದ ರಾಜಕಾರಣವಲ್ಲ ಎಂದು ಶಾ ಹೇಳಿರುವುದಾಗಿ ಕುಮಾರ್ ಬಂಗಾರಪ್ಪ ಉಲ್ಲೇಖಿಸಿದ್ದಾರೆ. ಪಕ್ಷವು ಇದೇ ತತ್ವವನ್ನು ಅನುಸರಿಸುತ್ತಿದ್ದು, ಗ್ರಾಮ ಪಂಚಾಯತ್, ತಾಲೂಕು ಪಂಚಾಯತ್, ಜಿಲ್ಲಾ ಪಂಚಾಯತ್ ಮತ್ತು ಕಾರ್ಪೊರೇಷನ್ ಚುನಾವಣೆಗಳಿಗೆ ಬೂತ್ ಮಟ್ಟದಲ್ಲಿ ಸಿದ್ಧತೆ ನಡೆಸುತ್ತಿದೆ ಎಂದಿದ್ದಾರೆ

## ಪುಟಿನ್ ಭೇಟಿಗೆ ಪ್ರತಿಪಕ್ಷ ನಾಯಕನಿಗೆ ಅವಕಾಶ ನಿರಾಕರಣೆ-ರಾಹುಲ್ ಗಾಂಧಿ ಅಸಮಾಧಾನ..!



**ನವದೆಹಲಿ:** ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅವರು ಭಾರತಕ್ಕೆ ಭೇಟಿ ನೀಡುತ್ತಿರುವ ಸಂದರ್ಭದಲ್ಲಿ, ಅವರನ್ನು ಭೇಟಿ ಮಾಡಲು ಲೋಕಸಭೆಯ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಅವರಿಗೆ ಅವಕಾಶ ನೀಡಿಲ್ಲ. ಈ ಕುರಿತು ರಾಹುಲ್ ಗಾಂಧಿ ಅವರು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದು , ಇದು ಭಾರತದ ರಾಜತಾಂತ್ರಿಕ ಶಿಷ್ಟಾಚಾರದ ಉಲ್ಲಂಘನೆ ಎಂದು ಆರೋಪಿಸಿದ್ದಾರೆ.

ರಷ್ಯಾ ಅಧ್ಯಕ್ಷರು ಇಂದು ಸಂಜೆ ದೆಹಲಿಗೆ ಆಗಮಿಸಲಿದ್ದಾರೆ. ಅವರ ಎರಡು ದಿನಗಳ ಭಾರತ ಪ್ರವಾಸವು ರಷ್ಯಾ ಮತ್ತು ಭಾರತದ ನಡುವಿನ ರಾಜತಾಂತ್ರಿಕ ಬಾಂಧವ್ಯವನ್ನು ಮತ್ತಷ್ಟು ಬಲಪಡಿಸುವ ನಿರೀಕ್ಷೆ ಇದೆ ಶಿಷ್ಟಾಚಾರ ಪಾಲಿಸುತ್ತಿಲ್ಲ: ರಾಹುಲ್ ಆರೋಪ

ಸಂಸತ್ ಭವನದ ಹೊರಗೆ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ರಾಹುಲ್ ಗಾಂಧಿ ಅವರು ಪ್ರಸ್ತುತ ಕೇಂದ್ರ ಸರ್ಕಾರದ ವರ್ತನೆಯನ್ನು ತೀವ್ರವಾಗಿ ಟೀಕಿಸಿದ್ದಾರೆ. ಸಾಮಾನ್ಯವಾಗಿ, ಯಾವುದೇ ದೇಶದ ಉನ್ನತ ನಾಯಕರು ಭಾರತಕ್ಕೆ ಭೇಟಿ ನೀಡಿದಾಗ, ದೇಶದ ಪ್ರತಿಪಕ್ಷದ ನಾಯಕರುಗಳೊಂದಿಗೆ ಸಭೆ ನಡೆಸುವುದು ಶಿಷ್ಟಾಚಾರ (Protocol). ಇದು ಒಂದು ಗೌರವಾನ್ವಿತ ಪರಂಪರೆ. ಈ ಹಿಂದೆ ಅಟಲ್ ಬಿಹಾರಿ ವಾಜಪೇಯಿ ಅವರ ನೇತೃತ್ವದ ಸರ್ಕಾರದಲ್ಲೂ, ಡಾ. ಮನಮೋಹನ್ ಸಿಂಗ್ ಅವರ ಸರ್ಕಾರದಲ್ಲೂ ಈ ಶಿಷ್ಟಾಚಾರವನ್ನು ಸರಿಯಾಗಿ ಪಾಲಿಸಲಾಗುತ್ತಿತ್ತು ಎಂದು ರಾಹುಲ್ ಗಾಂಧಿ ಹೇಳಿದರು.

ಆದರೆ ಈಗ ಪ್ರಧಾನಿ ನರೇಂದ್ರ ಮೋದಿ ಅವರ ಸರ್ಕಾರದಲ್ಲಿ ಈ ರಾಜತಾಂತ್ರಿಕ ಶಿಷ್ಟಾಚಾರವನ್ನು ಸಂಪೂರ್ಣವಾಗಿ ನಿರ್ಲಕ್ಷಿಸಲಾಗುತ್ತಿದೆ. ಇದು ದೇಶದ ಸಂಸದೀಯ ವ್ಯವಸ್ಥೆಗೆ ಮಾಡುವ ಅಗೌರವ ಎಂದು ಅವರು ದೂರಿದ್ದಾರೆ.

**ವಿದೇಶಿ ಗಣ್ಯರ ಭೇಟಿಗೆ ಅಡ್ಡಿ**

ಪುಟಿನ್ ಅವರ ಭೇಟಿಯ ಸಂದರ್ಭದಲ್ಲಿ ಮಾತ್ರವಲ್ಲದೆ, ಇತ್ತೀಚಿನ ದಿನಗಳಲ್ಲಿ ವಿದೇಶಿ ಗಣ್ಯರ ಭೇಟಿಯ ಸಂದರ್ಭದಲ್ಲಿಯೂ ಇದೇ ರೀತಿಯ ವರ್ತನೆ ಪುನರಾವರ್ತನೆಯಾಗುತ್ತಿದೆ ಎಂದು ರಾಹುಲ್ ಗಾಂಧಿ ಬೇಸರ ವ್ಯಕ್ತಪಡಿಸಿದ್ದಾರೆ. ನಾವು (ಭಾರತೀಯ ರಾಜಕಾರಣಿಗಳು) ವಿದೇಶಗಳಿಗೆ ಪ್ರಯಾಣಿಸಿದಾಗ, ಪ್ರತಿಪಕ್ಷದ ನಾಯಕರನ್ನು ಭೇಟಿ ಮಾಡಬಾರದು ಎಂದು ವಿದೇಶಾಂಗ ಸಚಿವಾಲಯವು ಸೂಚಿಸುತ್ತದೆ. ನಾವು ಭಾರತವನ್ನು ಪ್ರತಿನಿಧಿಸುತ್ತೇವೆ. ಆದರೆ ಈ ಸರ್ಕಾರಕ್ಕೆ ನಾವು ವಿದೇಶಿ ಗಣ್ಯರನ್ನು ಭೇಟಿ ಮಾಡುವುದು ಬೇಕಾಗಿಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದರು.ಮೋದಿ ಮತ್ತು ವಿದೇಶಾಂಗ ಸಚಿವಾಲಯಕ್ಕೆ ಅಭದ್ರತೆ

ಪ್ರಧಾನಿ ನರೇಂದ್ರ ಮೋದಿಮತ್ತು ವಿದೇಶಾಂಗ ಸಚಿವಾಲ ಈ ನಿರ್ಧಾರದ ಹಿಂದೆ 'ಅಭದ್ರತೆಯ ಭಾವನೆ' ಇದೆ ಎಂದು ರಾಹುಲ್ ಗಾಂಧಿ ನೇರವಾಗಿ ಟೀಕಿಸಿದರು.

ಪ್ರಧಾನಿ ಮೋದಿ ಅವರಿಗೆ ಮತ್ತು ವಿದೇಶಾಂಗ ಸಚಿವಾಲಯಕ್ಕೆ ಇಂತಹ ನಿರ್ಧಾರ ತೆಗೆದುಕೊಳ್ಳಲು ಅಭದ್ರತೆಯ ಕಾರಣಗಳು ಇರಬಹುದು. ದೇಶದ ರಾಜತಾಂತ್ರಿಕ ಸಂಬಂಧಗಳಲ್ಲಿ ಪ್ರತಿಪಕ್ಷದ ಪಾತ್ರವನ್ನು ಸರ್ಕಾರವು ಒಪ್ಪಿಕೊಳ್ಳಲು ಸಿದ್ಧವಿಲ್ಲದಿರುವುದು ವಿಷಾದನೀಯ. ಸರ್ಕಾರ ವಿಭಿನ್ನವಾಗಿ ವರ್ತಿಸುತ್ತಿದೆ ಎಂದು ರಾಹುಲ್ ಗಾಂಧಿ ಹೇಳಿದ್ದಾರೆ. ಪ್ರತಿಪಕ್ಷದ ನಾಯಕನಾಗಿ, ದೇಶಕ್ಕೆ ಭೇಟಿ ನೀಡುವ ಪ್ರಮುಖ ಜಾಗತಿಕ ನಾಯಕರೊಂದಿಗೆ ಸಂವಾದ ನಡೆಸುವುದು ದೇಶದ ಹಿತದೃಷ್ಟಿಯಿಂದ ಹಾಗೂ ರಾಜಕೀಯ ಸೌಹಾರ್ದತೆಯ ದೃಷ್ಟಿಯಿಂದ ಮಹತ್ವದ್ದಾಗಿದೆ. ಆದರೆ, ಪ್ರಸ್ತುತ ಸರ್ಕಾರ ರಾಜಕೀಯ ಕಾರಣಗಳಿಗಾಗಿ ಈ ಶಿಷ್ಟಾಚಾರಕ್ಕೆ ತಿಲಾಂಜಲಿ ಇಟ್ಟಿದೆ ಎಂದು ಆರೋಪ ಮಾಡಿದ್ದಾರೆ.

ಪುಟಿನ್ ಅವರ ದೆಹಲಿ ಪ್ರವಾಸ

ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅವರು ಇಂದು ಸಂಜೆ ದೆಹಲಿಗೆ ಆಗಮಿಸಲಿದ್ದಾರೆ. ಭಾರತ ಮತ್ತು ರಷ್ಯಾದ ಉನ್ನತ ಮಟ್ಟದ ನಾಯಕರ ನಡುವೆ ದ್ವಿಪಕ್ಷೀಯ ಮಾತುಕತೆಗಳು, ರಕ್ಷಣೆ, ವ್ಯಾಪಾರ, ಮತ್ತು ಇಂಧನ ವಲಯಗಳಲ್ಲಿ ಹೊಸ ಒಪ್ಪಂದಗಳು ಮತ್ತು ಕಾರ್ಯತಂತ್ರದ ಸಹಭಾಗಿತ್ವದ ಬಗ್ಗೆ ಚರ್ಚೆಗಳು ನಡೆಯಲಿವೆ. ಈ ಮಹತ್ವದ ಭೇಟಿಯ ಸಂದರ್ಭದಲ್ಲಿ, ಪ್ರತಿಪಕ್ಷದ ನಾಯಕರಿಗೆ ಭೇಟಿಗೆ ಅವಕಾಶ ನೀಡದಿರುವ ಸರ್ಕಾರದ ನಿರ್ಧಾರವು ಚರ್ಚೆಗೆ ಗ್ರಾಸವಾಗಿದೆ.

# 17 ಮನೆ ದೋಚಿದ್ದ 'ಖತರ್ನಾಕ್' ಕಳ್ಳ ಅರೆಸ್ಟ್: ₹70 ಲಕ್ಷ ನಗದು, ಚಿನ್ನಾಭರಣ ವಶ

**ಬೆಂಗಳೂರು:** ಕಳೆದ ಮೂರು ವರ್ಷಗಳಿಂದ ಬೆಂಗಳೂರು ಪೊಲೀಸರಿಗೆ ಸಿಂಹಸ್ವಪ್ನವಾಗಿದ್ದ, ಸರಣಿ ಮನೆಗಳ್ಳತನ ಪ್ರಕರಣಗಳ ಪ್ರಮುಖ ಆರೋಪಿಯನ್ನು ಕೆ.ಆರ್. ಪುರಂ ಠಾಣಾ ಪೊಲೀಸರು ಯಶಸ್ವಿಯಾಗಿ ಬಂಧಿಸಿದ್ದಾರೆ. ನಗರದ ವಿವಿಧ ಭಾಗಗಳಲ್ಲಿ ಒಟ್ಟು 17 ಮನೆಗಳನ್ನು ದೋಚಿದ್ದ ಈ ಖತರ್ನಾಕ್ ಕಳ್ಳನಿಂದ ಬೃಹತ್ ಪ್ರಮಾಣದ ಚಿನ್ನಾಭರಣ ಮತ್ತು ನಗದನ್ನು ವಶಪಡಿಸಿಕೊಳ್ಳಲಾಗಿದೆ.

**₹1.2 ಕೋಟಿಗೂ ಅಧಿಕ ಮೌಲ್ಯದ ಕಳವು ವಶ**

ಕೆ.ಆರ್. ಪುರಂ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಈ ಬಂಧನ ಕಾರ್ಯಾಚರಣೆ ನಡೆದಿದೆ. ಬಂಧಿತ ಆರೋಪಿಯನ್ನು ಮೊಹಮ್ಮದ್ ಇಸ್ರಾರ್ ಎಂದು ಗುರುತಿಸಲಾಗಿದೆ. ಈತನಿಂದ ಪೊಲೀಸರು ವಶಪಡಿಸಿಕೊಂಡಿರುವ ಕಳವು ಮಾಲುಗಳ ವಿವರ ಹೀಗಿದೆ: ವಶಪಡಿಸಿಕೊಂಡಿರುವ ಒಟ್ಟು ಕಳವು ಮಾಲುಗಳ ಮೌಲ್ಯವು ಸದ್ಯದ ಮಾರುಕಟ್ಟೆ ದರದ ಪ್ರಕಾರ ₹1.2 ಕೋಟಿಗೂ ಅಧಿಕವಿರಬಹುದೆಂದು ಅಂದಾಜಿಸಲಾಗಿದೆ. ಇಷ್ಟೊಂದು ದೊಡ್ಡ ಪ್ರಮಾಣದ ಕಳವು ಮಾಲನ್ನು ವಶಪಡಿಸಿಕೊಂಡಿರುವುದು ಪೊಲೀಸರ ಈ ಕಾರ್ಯಾಚರಣೆಯ ಯಶಸ್ಸಿಗೆ ಸಾಕ್ಷಿಯಾಗಿದೆ.

ಮೊಹಮ್ಮದ್ ಇಸ್ರಾರ್ ಕಳೆದ ಮೂರು ವರ್ಷಗಳಿಂದ ನಿರಂತರವಾಗಿ ಕಳ್ಳತನ ನಡೆಸುತ್ತಿದ್ದರೂ, ಪೊಲೀಸರ ಕೈಗೆ ಸಿಗದೆ ಕಣ್ಣಾಮುಚ್ಚಾಲೆ ಆಡುತ್ತಿದ್ದ. ಪೊಲೀಸರಿಂದ ತಪ್ಪಿಸಿಕೊಳ್ಳಲು ದಿನೇ ದಿನೇ ಹೊಸ ವೇಷ ದರಿಸಿಕೊಳ್ಳುತಿದ್ದ.

ವೇಷ ಬದಲಾವಣೆ ಕಳ್ಳತನಕ್ಕೆ ತೆರಳುವ ಮುನ್ನ ಒಂದು ರೀತಿಯ ಬಟ್ಟೆಯನ್ನು ಧರಿಸುತ್ತಿದ್ದ ಆರೋಪಿ, ಕಳ್ಳತನದ ನಂತರ ತಕ್ಷಣವೇ ಬೇರೆ ಬಟ್ಟೆಗಳನ್ನು ಬದಲಾಯಿಸಿ ಸ್ಥಳದಿಂದ ಪರಾರಿಯಾಗುತ್ತಿದ್ದ. ಇದರಿಂದ ಸಿಸಿಟಿವಿ ದೃಶ್ಯಾವಳಿಗಳಲ್ಲಿ ಆತನ ಗುರುತು ಪತ್ತೆ ಹಚ್ಚುವುದು ಕಷ್ಟವಾಗುತ್ತಿತ್ತು.

ಬೈಕ್ ನಂಬರ್ ಪ್ಲೇಟ್ ಬದಲಾವಣೆ: ಆತ ಬಳಸುತ್ತಿದ್ದ ಬೈಕ್‌ನ ನಂಬರ್ ಪ್ಲೇಟ್‌ಗಳನ್ನು ಆಗಾಗ ಬದಲಾಯಿಸುತ್ತಿದ್ದ. ಇದರಿಂದ ಪೊಲೀಸರು ವಾಹನದ ಮೂಲಕ ಆತನನ್ನು ಪತ್ತೆ ಹಚ್ಚುವ ಪ್ರಯತ್ನ ವಿಫಲವಾಗುತ್ತಿತ್ತು.

ಸ್ಥಳ ಮತ್ತು ಸಮಯದ ಆಯ್ಕೆ: ಹೆಚ್ಚಾಗಿ ಬೀಗ ಹಾಕಿರುವ ಮನೆಗಳನ್ನೇ ಗುರಿಯಾಗಿಸುತ್ತಿದ್ದ. ರಾತ್ರಿಯ ಸಮಯ ಅಥವಾ ಮನೆಯವರು ಬಹಳ ದಿನಗಳ ಕಾಲ ಊರಿನಲ್ಲಿ ಇಲ್ಲದಿರುವುದನ್ನ ನೋಡಿ ಆ ಮನೆಯನ್ನ ಕಳ್ಳತನ ಮಾಡುತ್ತಿದ್ದ, ಹೀಗಾಗಿ ಮನೆಯಲ್ಲಿ ಕಳ್ಳತನವಾಗಿದೆ ಎಂದು ತಿಳಿದುಕೊಳ್ಳಲು ಬಹಳ ಸಮಯ ತೆಗೆದುಕೊಳ್ಳುತ್ತಿದ್ದರಿಂದ ಆತನನ್ನ ಪತ್ತೆಹಚ್ಚಲು ಸಮಯ ತೆಗೆದುಕೊಳ್ಳುತ್ತಿತ್ತು.

ಕಳೆದ ಮೂರು ವರ್ಷಗಳಿಂದ ನಗರದ ಅನೇಕ ಮನೆಗಳ್ಳತನ ಪ್ರಕರಣಗಳಲ್ಲಿ ಈತನದೇ ಕೈವಾಡವಿತ್ತು. ಇಸ್ರಾರ್ ವಿರುದ್ಧ ಕೆ.ಆರ್. ಪುರಂ ಸೇರಿದಂತೆ ನಗರದ ಇತರ ಪೊಲೀಸ್ ಠಾಣೆಗಳಲ್ಲೂ ಪ್ರಕರಣಗಳು ದಾಖಲಾಗಿವೆ. ಮೊಹಮ್ಮದ್ ಇಸ್ರಾರ್‌ನ ಚಲನವಲನಗಳ ಕುರಿತು ಕೆ.ಆರ್. ಪುರಂ ಠಾಣಾ ಪೊಲೀಸರು ಹಲವು ತಿಂಗಳುಗಳಿಂದ ನಿರಂತರವಾಗಿ ಕಣ್ಗಾವಲು ಇರಿಸಿದ್ದರು. ಹಳೆಯ ಕಳ್ಳತನ ಪ್ರಕರಣಗಳ ಮಾದರಿಗಳು, ಸಿಸಿಟಿವಿ ತುಣುಕುಗಳು ಮತ್ತು ತಾಂತ್ರಿಕ ಸಾಕ್ಷ್ಯಗಳ ಆಧಾರದ ಮೇಲೆ ಪೊಲೀಸರು ಒಂದು ನಿರ್ದಿಷ್ಟ ಮಾದರಿಯನ್ನು ಗುರುತಿಸಿದರು. ಸುದೀರ್ಘ ಪ್ರಯತ್ನದ ನಂತರ, ಪೊಲೀಸರ ತಂಡವೊಂದು ಯಶಸ್ವಿಯಾಗಿ ಈ ಖತರ್ನಾಕ್ ಕಳ್ಳನನ್ನು ಬಂಧಿಸುವಲ್ಲಿ ಸಫಲವಾಗಿದೆ.

ಈ ಬಂಧನದಿಂದಾಗಿ ಕೆ.ಆರ್. ಪುರಂ ಮತ್ತು ಸುತ್ತಮುತ್ತಲಿನ ಪ್ರದೇಶಗಳ ನಿವಾಸಿಗಳು ನಿಟ್ಟುಸಿರು ಬಿಟ್ಟಿದ್ದಾರೆ. ಕಳುವಾದ ಮಾಲನ್ನು ವಶಪಡಿಸಿಕೊಂಡ ನಂತರ, ಪೊಲೀಸರು ಅದನ್ನು ನ್ಯಾಯಾಲಯದ ಅನುಮತಿಯೊಂದಿಗೆ ಕಳುವಾದ ಮನೆಯ ಮಾಲೀಕರಿಗೆ ಹಿಂದಿರುಗಿಸುವ ಪ್ರಕ್ರಿಯೆಯನ್ನು ಆರಂಭಿಸಲಿದ್ದಾರೆ.

ಸದ್ಯ ಆರೋಪಿಯನ್ನು ವಶಕ್ಕೆ ಪಡೆದಿರುವ ಪೊಲೀಸರು, ಆತ ಈ ಕಳ್ಳತನದ ಮಾಲನ್ನು ಎಲ್ಲಿ ಮಾರಾಟ ಮಾಡುತ್ತಿದ್ದ ಅಥವಾ ಇಷ್ಟು ದೊಡ್ಡ ಪ್ರಮಾಣದ ನಗದನ್ನು ಹೇಗೆ ಸಂಗ್ರಹಿಸಿದ್ದ ಎಂಬುದರ ಕುರಿತು ವಿಚಾರಣೆ ನಡೆಸುತ್ತಿದ್ದಾರೆ.

# ಮೆಕ್ಕೆಜೋಳ ಖರೀದಿ ಕೇಂದ್ರ ತೆರೆದ್ರೂ ತಪ್ಪದ ರೈತರ ಸಂಕಷ್ಟ



**ಧಾರವಾಡ:** ಮೆಕ್ಕೆಜೋಳ ಖರೀದಿ ಕೇಂದ್ರ ತೆರೆಯಬೇಕು ಎಂದು ಧಾರವಾಡದಲ್ಲಿ ಮೆಕ್ಕೆಜೋಳ ಬೆಳೆಗಾರರು ದೊಡ್ಡಮಟ್ಟದಲ್ಲೇ ಹೋರಾಟ ನಡೆಸಿದ್ದರು. ಇದರ ಪರಿಣಾಮ ಮೆಕ್ಕೆಜೋಳ ಬೆಳೆಗಾರರಿಗೆ ಸರ್ಕಾರ ದಾರಿ ಹುಡುಕಿಕೊಟ್ಟಿದ್ದು , ಆ ಪ್ರಕಾರ ಸರ್ಕಾರವೇ ಮೆಕ್ಕೆಜೋಳ ಖರೀದಿ ಮಾಡುತ್ತಿದೆ. ಇಲ್ಲೂ ಸಹ ರೈತರಿಗೆ ಸಂಕಷ್ಟ ಎದುರಾಗಿದೆ. ಬೆಂಬಲ ಬೆಲೆಯಡಿ ಸರ್ಕಾರವೇ ಖರೀದಿ ಕೇಂದ್ರಗಳ ಮೂಲಕ ರೈತರು ಬೆಳೆದ ಮೆಕ್ಕೆಜೋಳ ಖರೀದಿ ಮಾಡುವಂತೆ
ಆಗ್ರಹಿಸಿ ಧಾರವಾಡ ನವಲಗುಂದ, ಕುಂದಗೋಳ ಸೇರಿದಂತೆ ಇತರ ಭಾಗದ ರೈತರು ಹೋರಾಟ ನಡೆಸಿದ್ದರು. ಇದರ ಪರಿಣಾಮ ರಾಜ್ಯ ಸರ್ಕಾರ ರಾಜ್ಯದಾದ್ಯಂತ ಇರುವ ಕೆಎಂಎಫ್ ಘಟ ಕಗಳ ಮೂಲಕ ಪ್ರತಿ ಕ್ವಿಂಟಾ ಲ್ ಮೆಕ್ಕೆಜೋಳಕ್ಕೆ 2,400 ರೂ.ದರ ನಿಗದಿ ಮಾಡಿ ಖರೀ ದಿಗೆ ಮುಂದಾಗಿದೆ. ಆದರೆ, ರಾಜ್ಯ ಸರ್ಕಾರ ಕೇವಲ 50 ಸಾವಿರ ಮೆಟ್ರಿಕ್ ಟನ್ ಮೆಕ್ಕೆಜೋಳ ಮಾತ್ರ ಖರೀದಿಸಲು ಮುಂದಾಗಿದೆ ಇದಲ್ಲದೇ ಸಕ್ಕರೆ ಕಾರ್ಖಾ ನೆಗಳ ಮೂಲಕವೂ ಮೆಕ್ಕೆಜೋಳ ಖರೀದಿಸಲು ಸರ್ಕಾರ ಸೂಚನೆ ನೀಡಿದೆ. ಧಾರವಾಡದ ರಾಯಾಪುರದಲ್ಲಿರುವ ಕೆಎಂಎಫ್ ಘಟಕದಿಂದ ರೈತರು ಬೆಳೆದ ಮೆಕ್ಕೆಜೋಳ ಖರೀದಿ ಮಾಡಲಾಗುತ್ತಿದೆ. ಧಾರವಾಡ ಹಾಲು ಒಕ್ಕೂಟಕ್ಕೆ ಒಳಪಡುವ ಧಾರವಾಡ ಹಾವೇರಿ ಮತ್ತು ಗದಗ ಜಿಲ್ಲೆಯ ಅನೇಕ ಭಾಗದ ರೈತರು ಇಲ್ಲಿಗೆ ಬಂದು ತಮ್ಮ ಮೆಕ್ಕೆಜೋಳ ಮಾರಾ ಟ ಮಾಡುತ್ತಿದ್ದಾರೆ. ಆದರೆ, ಸರ್ಕಾರ ಹಾ ಗೂ

ಧಾರವಾಡ ಜಿಲ್ಲಾಡಳಿತ ನಿಗದಿಪ ಡಿಸಿದಂತೆ ಮೆಕ್ಕೆಜೋಳವನ್ನು ಇಲ್ಲಿ ಖರೀದಿ ಮಾಡಲಾಗುತ್ತಿಲ್ಲ.

5 ಕ್ವಿಂಟಾಲ್ ಮೆಕ್ಕೆಜೋಳ ಖರೀದಿಸಲು ಆದೇಶವಿದ್ದರೂ ಇಲ್ಲಿ ಕೇವಲ 20 ಕ್ವಿಂಟಾಲ್ ಮಾತ್ರ ಮೆಕ್ಕೆಜೋಳ ಖರೀದಿ ಮಾಡಲಾಗುತ್ತಿದೆ. ಬಾಕಿ ಉಳಿದ ಮೆಕ್ಕೆಜೋಳವನ್ನು ರೈತರು ತೆಗೆದುಕೊಂಡು ಹೋಗಿ ಏನು ಮಾಡಬೇಕು. ಪ್ರತಿಯೊಬ್ಬ ರೈತನಿಂದ 25 ಕ್ವಿಂಟಾಲ್ ಮೆಕ್ಕೆಜೋಳವನ್ನು ಕೆಎಂಎಫ್ ಖರೀದಿ ಮಾಡಬೇಕು ಎಂದು ರೈತರು ಆಗ್ರಹಿಸಿದ್ದಾರೆ.

ಸರ್ಕಾರ ರಾಜ್ಯದಾದ್ಯಂತ 50 ಸಾವಿರ ಮೆಟ್ರಿಕ್ ಟನ್ ಮೆಕ್ಕೆಜೋಳ ಖರೀದಿಗೆ ಮುಂದಾಗಿದೆ. ಒಬ್ಬ ರೈತನಿಂದ 25 ಕ್ವಿಂಟಾಲ್ ಮೆಕ್ಕೆಜೋಳ ಖರೀದಿ ಮಾಡಿದರೆ ಇನ್ನುಳಿದ ರೈತರಿಗೆ ಈ ಲಾಭ ಸಿಗುವುದಿಲ್ಲ ಎಂಬ ಕಾರಣವನ್ನು ಕೆಎಂಎಫ್ ವ್ಯವಸ್ಥಾಪಕ ನಿರ್ದೇಶಕರು ಹೇಳಿದ್ದಾರೆ. ಮೆಕ್ಕೆಜೋಳ ಖರೀದಿ ಕೇಂದ್ರಕ್ಕೆ ಆಗ್ರಹಿಸಿದ್ದ ರೈತರಿಗೆ ಸರ್ಕಾರವೇನೋ ಈ ರೀತಿ ಕೆಎಂಎಫ್ ಹಾಗೂ ಸಕ್ಕರೆ ಕಾರ್ಖಾನೆ ಎಂದು ಹೇಳಿ ರೈತರಿಗೆ ಲಿಂಕ್ ಮಾಡಿ ಈ ಸಮಸ್ಯೆ ತಂದೊಡ್ಡಿದೆ. ಸದ್ಯ ದೊಡ್ಡ ರೈತರು ಹೆಚ್ಚುವರಿ ಮೆಕ್ಕೆಜೋಳ ಬೆಳೆದಿದ್ದರೆ ಅದು ಮತ್ತೇ ಹೊರಗೆ ಕಡಿಮೆ ದರದಲ್ಲೇ ಮಾರಾಟ ಮಾಡಬೇಕಾದ ಸ್ಥಿತಿ ಬಂದಿದೆ.

# ರಿಹ್ಯಾಬ್ ಸೆಂಟರ್‌ನಲ್ಲಿ ಮತ್ತೋರ್ವ ವ್ಯಕ್ತಿ ಸಾವು



ನೆಲಮಂಗಲದಲ್ಲಿ ನಡೆದಿರುವ ರಿಹ್ಯಾ ಬ್ ಸೆಂಟರ್‌ಗಳ ಬಗ್ಗೆ ಮತ್ತೊಂದು ಚಿಂತೆ ಹುಟ್ಟಿಸುವ ಘಟನೆ ಬೆಳಕಿಗೆ ಬಂದಿದೆ. ಮಾದನಾಯಕನಹಳ್ಳಿ ಬಳಿ ಕಾರ್ಯನಿರ್ವಹಿಸುತ್ತಿರುವ ಅಮ್ಮೂಸ್ ರಿಹ್ಯಾಬ್ ಸೆಂಟರ್‌ನಲ್ಲಿ ಮತ್ತೊಬ್ಬ ವ್ಯಕ್ತಿ ಅನುಮಾ ನಾಸ್ಪದವಾಗಿ ಸಾವನ್ನಪ್ಪಿರುವ ಪ್ರಕರಣ ಉದ್ಭವಿಸಿದೆ. ನಾಲ್ಕು ದಿನಗಳ ಹಿಂದೆ ಕುಟುಂಬದವರು ಇಲ್ಲಿ ದಾಖಲಿಸಿದ ಕೇರಳ ಮೂಲದ 42 ವರ್ಷದ ಮನೀಶ್ ಕೆ.ಜಿ. ಅವರು ನಿನ್ನೆ ಜೀವ ಕಳೆದುಕೊಂಡಿದ್ದಾರೆ.

ಪ್ರಾಥಮಿಕ ಮಾಹಿತಿಯ ಪ್ರಕಾರ, ಮನೀಶ್ ಅವರನ್ನು ಕೈ-ಕಾಲು ಕಟ್ಟಿರುವ ದೃಶ್ಯಗಳು ಹಾಗೂ ಚಿತ್ರಹಿಂಸೆಗೆ ಒಳಗಾಗಿರುವಂತೆ ಕಾಣುವ ಸಿಸಿಟಿವಿ ದೃಶ್ಯಗಳು ಸಿಕ್ಕಿರುವುದಾಗಿ ಹೇಳಲಾಗಿದೆ. ಈ ದೃಶ್ಯಗಳು ಈಗ ಪೊಲೀಸರು ಮತ್ತು ತನಿಖಾಧಿಕಾರಿಗಳ ಗಮನ ಸೆಳೆದಿವೆ. ಇತ್ತೀಚೆಗಷ್ಟೇ ಇದೇ ರಿಹ್ಯಾಬ್ ಸೆಂಟರ್‌ನಲ್ಲಿ ಒಬ್ಬ ಯುವಕ ಸಾವನ್ನಪ್ಪಿದ ಪ್ರಕರಣ ಸಿಐಡಿಗೆ ವರ್ಗಾವಣೆಗೊಂಡಿತ್ತು. ಈ ಹಿನ್ನೆಲೆ ಮತ್ತೊಂದು ಸಾವು ಸಂಭವಿಸಿರುವುದು ಆತಂಕಕ್ಕೆ ಕಾರಣವಾಗಿದೆ.

ಮನೀಶ್ ಅವರು ಅನುಮಾನಾಸ್ಪದ ಪರಿಸ್ಥಿತಿಯಲ್ಲಿ ಸಾವನ್ನಪ್ಪಿರುವುದರಿಂದ, ಅವರ ಶವವನ್ನು ಮರಣೋತ್ತರ ಪರೀಕ್ಷೆಗೆ ನೆಲಮಂಗಲ ಶವಗಾರಕ್ಕೆ ಕಳುಹಿಸಲಾಗಿದೆ.

ಮಾದನಾಯಕನಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು , ಪೊಲೀಸರು ಮರಣೋತ್ತರ ಪರೀಕ್ಷೆ ವರದಿಗಾಗಿ ಕಾಯುತ್ತಿದ್ದಾರೆ. ವರದಿ ಹೊರಬಿದ್ದ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಪೊಲೀಸರು ತಿ ಳಿ ಸಿ ದ್ದಾ ರೆ .

ಈ ಘಟನೆ ರಿಹ್ಯಾಬ್ ಸೆಂಟರ್‌ಗಳಲ್ಲಿ ನಡೆಯುತ್ತಿರುವ ವ್ಯವಸ್ಥೆ, ಸುರಕ್ಷತಾ ಕ್ರಮಗಳು ಮತ್ತು ನೈತಿಕತೆಯ ಬಗ್ಗೆ ಗಂಭೀರ ಪ್ರಶ್ನೆಗಳನ್ನು ಎಬ್ಬಿಸಿದೆ. ಕುಟುಂಬದವರು ನ್ಯಾಯಕ್ಕಾಗಿ ಆಗ್ರಹಿಸುತ್ತಿದ್ದು , ಪೊಲೀಸರು ಸೂಕ್ಷ್ಮವಾಗಿ ತನಿಖೆ ಮುಂದುವರೆಸುತ್ತಿದ್ದಾರೆ.

## ದರ್ಶನ್ ಕೇಸ್: ರೇಣುಕಾಸ್ವಾಮಿ ತಂದೆ-ತಾಯಿಗೆ ಸಮನ್ಸ್ ಜಾರಿ

ಬೆಂಗಳೂರು: ಕನ್ನಡ ಚಿತ್ರರಂಗದ ಖ್ಯಾತ ನಟ ದರ್ಶನ್ ತೂಗುದೀಪ್ ಎರಡನೇ ಆರೋಪಿಯಾಗಿರುವ ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣ ತಿರುವು ಪಡೆದುಕೊಂಡಿದೆ. ಬೆಂಗಳೂರಿನ ಸೆಷನ್ಸ್ ನ್ಯಾಯಾಲಯವು ಡಿಸೆಂಬರ್ 17 ರಿಂದ ಸಾಕ್ಷಿಗಳ ವಿಚಾರಣೆಯನ್ನು ಆರಂಭಿಸಲು ದಿನಾಂಕ ನಿಗದಿಪಡಿಸಿದೆ. ಈ ಹಿನ್ನೆಲೆಯಲ್ಲಿ ಮೃತ ರೇಣುಕಾಸ್ವಾಮಿ ಅವರ ತಂದೆ ಶಿವಯೋಗಿ ಮತ್ತು ತಾಯಿ ರತ್ನಮ್ಮ ಅವರಿಗೆ ಸಹ ನ್ಯಾಯಾಲಯವು ಸಮನ್ಸ್ ಜಾರಿಗೊಳಿಸಿದೆ.

ಬುಧವಾರ ನಡೆದ ವಿಚಾರಣೆಯಲ್ಲಿ ಸಹಾಯಕ ಸಾರ್ವಜನಿಕ ಅಭಿಯೋಜಕ (ಎಸ್‌ಪಿಪಿ) ಸಚಿನ್ ಗುಂಡ್ರೆ ಅವರು ಮೊದಲ ಹಂತದ ಸಾಕ್ಷಿಗಳ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿದರು. ಈ ಪಟ್ಟಿಯಲ್ಲಿ ಮೂವರು ಪ್ರಮುಖ ಸಾಕ್ಷಿಗಳ ಹೆಸರಿದ್ದು , ಅವರೆಲ್ಲರಿಗೂ ಕೋರ್ಟ್ ತಕ್ಷಣ ಸಮನ್ಸ್ ಜಾರಿಮಾಡಿದೆ.

# 3ನೇ ದಿನವೂ ಇಂಡಿಗೋ ವಿಮಾನಯಾನದಲ್ಲಿ ಗೊಂದಲ: ಬೆಂಗಳೂರಿನಲ್ಲಿ 73 ವಿಮಾನ ರದ್ದು

ಬೆಂಗಳೂರು: ದೇಶದ ಅತಿದೊಡ್ಡ ವಿಮಾನಯಾನ ಸಂಸ್ಥೆಗಳಲ್ಲಿ ಒಂದಾದ ಇಂಡಿಗೋ ವಿಮಾನಗಳ ಹಾರಾಟದಲ್ಲಿ ಉಂಟಾಗಿರುವ ಗಂಭೀರ ಅಡಚಣೆಯು ಸತತ ಮೂರನೇ ದಿನಕ್ಕೆ ಕಾಲಿಟ್ಟಿದೆ. ತಾಂತ್ರಿಕ ದೋಷಗಳು, ಸಿಬ್ಬಂದಿ ಕೊರತೆ ಮತ್ತು ಹವಾಮಾನ ಬದಲಾವಣೆಯಿಂದಾಗಿ ದೇಶಾದ್ಯಂತ ವಿಮಾನಗಳ ಹಾರಾಟ ರದ್ದಾಗಿದ್ದು , ಸಾವಿರಾರು ಪ್ರಯಾಣಿಕರು ವಿಮಾನ ನಿಲ್ದಾಣಗಳಲ್ಲಿ ಸಂಕಷ್ಟಕ್ಕೆ ಸಿಲುಕಿದ್ದಾರೆ. ನಿನ್ನೆ (ಎರಡನೇ ದಿನ) ದೆಹಲಿ, ಮುಂಬೈ, ಬೆಂಗಳೂರು ಸೇರಿದಂತೆ ಪ್ರಮುಖ ವಿಮಾನ ನಿಲ್ದಾಣಗಳಿಂದ ಸುಮಾರು 200 ವಿಮಾನಗಳ ಹಾರಾಟವನ್ನು ರದ್ದುಗೊಳಿಸಲಾಗಿತ್ತು.

ಇಂದಿಗೂ ಮುಂದುವರಿದ ರದ್ದತಿ: ದೇಶಾದ್ಯಂತ 100+ ವಿಮಾನಗಳ ಮೇಲೆ ಪರಿಣಾಮ ಈ ಸಮಸ್ಯೆ ಮೂರನೇ ದಿನವೂ ಮುಂದುವರಿಯುವ ಸಾಧ್ಯತೆಗಳಿದ್ದು , ದೇಶಾದ್ಯಂತ 100ಕ್ಕೂ ಹೆಚ್ಚು ವಿಮಾನಗಳ ಹಾರಾಟ ಇಂದು



ಕೂಡ ರದ್ದಾಗುವ ಭೀತಿ ಎದುರಾಗಿದೆ. ಇನ್ನು ಹಲವು ವಿಮಾನಗಳ ಹಾರಾಟದಲ್ಲಿ ಗಣನೀಯ ವಿಳಂಬ ಕಂಡುಬರುತ್ತಿದ್ದು , ಪ್ರಯಾಣಿಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

**ಬೆಂಗಳೂರು ಏರ್‌ಪೋರ್ಟ್‌ನಲ್ಲಿ ಭಾರೀ ವ್ಯತ್ಯಯ**

ರಾಜಧಾನಿ ಬೆಂಗಳೂರಿನಲ್ಲಿರುವ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ (ಇಂಡಿಗೋ ವಿಮಾನಗಳ ಹಾರಾಟದಲ್ಲಿ ಭಾರಿ ವ್ಯತ್ಯಯ ಉಂಟಾಗಿದೆ ನಿನ್ನೆ (ಎರಡನೇ ದಿನ) ಬೆಂಗಳೂರಿನಿಂದ 43 ಇಂಡಿಗೋ ವಿಮಾನಗಳ ಹಾರಾಟವನ್ನು ರದ್ದುಗೊಳಿಸಲಾಗಿತ್ತು.
ಆದರೆ, ಇಂದು (ಮೂರನೇ ದಿನ) ಈ ಸಂಖ್ಯೆ ಮತ್ತಷ್ಟು ಹೆಚ್ಚಾಗಿದ್ದು , ಒಟ್ಟು 73 ಇಂಡಿಗೋ ವಿಮಾನಗಳ ಹಾರಾಟವನ್ನು ರದ್ದುಗೊಳಿಸಲಾಗಿದೆ. ಇಂಡಿಗೋ ಪ್ರಯಾಣಿಕರು ತಮ್ಮ ಪ್ರವಾಸವನ್ನು ರದ್ದುಗೊಳಿಸುವುದು ಇಲ್ಲವೇ ಬೇರೆ ವಿಮಾನಯಾನ ಸಂಸ್ಥೆಗಳನ್ನು ಆಶ್ರಯಿಸುವುದು ಅನಿವಾರ್ಯವಾಗಿದೆ.

ಡಿಜಿಸಿಎಯಿಂದ ಇಂಡಿಗೋ ಅಧಿಕಾರಿಗಳಿಗೆ ಬುಲಾವ್ಸ ಸತತ ವಿಮಾನಗಳ ರದ್ದತಿ ಮತ್ತು ವಿಳಂಬದಿಂದಾಗಿ ಪ್ರಯಾಣಿಕರಿಗೆ ಆಗುತ್ತಿರುವ ತೊಂದರೆಗಳನ್ನು ಗಂಭೀರವಾಗಿ ಪರಿಗಣಿಸಿರುವ ನಾಗರಿಕ ವಿಮಾನಯಾನ ಮಹಾನಿರ್ದೇಶನಾಲಯ (DGCA), ಇಂಡಿಗೋ ಸಂಸ್ಥೆಗೆ ನೋಟಿಸ್ ನೀಡಿದೆ. ವಿಮಾನಗಳ ವಿಳಂಬ ಮತ್ತು ರದ್ದತಿಗಳ ಹಿಂದಿನ ನಿಖರ ಕಾರಣಗಳನ್ನು ವಿವರಿಸುವಂತೆ ಡಿಜಿಸಿಎ ಸೂಚಿಸಿದೆ. ಅಲ್ಲದೇ, ಪ್ರಯಾಣಿಕರ ಸಂಕಷ್ಟವನ್ನು ಪರಿಹರಿಸಲು ಮತ್ತು ಪರಿಸ್ಥಿತಿ ಸುಧಾರಿಸಲು ಸ್ಪಷ್ಟ ಯೋಜನೆಯನ್ನು ಒದಗಿಸುವಂತೆ ಇಂಡಿಗೋಗೆ ಆದೇಶಿಸಿದೆ. ಈ ವಿಷಯದ ಬಗ್ಗೆ ಚರ್ಚಿಸಲು, ಡಿಜಿಸಿಎ ಇಂದು ಮಧ್ಯಾಹ್ನ ನಡೆಯಲಿರುವ ಉನ್ನತ ಮಟ್ಟದ ಸಭೆಗೆ ಇಂಡಿಗೋ ಅಧಿಕಾರಿಗಳಿಗೆ ತುರ್ತು ಬುಲಾವ್ ನೀಡಿದೆ.

**48 ಗಂಟೆಗಳಲ್ಲಿ ಸುಧಾರಣೆಯ ಭರವಸೆ ನೀಡಿದ ಇಂಡಿಗೋ**

ಸಂಸ್ಥೆಯಲ್ಲಿ ಉಂಟಾಗಿರುವ ಗೊಂದಲ ಮತ್ತು ಅಡಚಣೆಗಳ ಕುರಿತು ಇಂಡಿಗೋ ಸಂಸ್ಥೆಯು ಔಪಚಾರಿಕ ಪ್ರತಿಕ್ರಿಯೆ ನೀಡಿದೆ. ಸಂಸ್ಥೆಯು ಪ್ರಯಾಣಿಕರಿಗೆ ಉಂಟಾದ ತೊಂದರೆಗೆ ಕ್ಷಮೆಯಾಚಿಸುತ್ತೇವೆ. ಸಮಸ್ಯೆಯನ್ನು ಬಗೆಹರಿಸಿ, ಮುಂದಿನ 48 ಗಂಟೆಗಳೊಳಗೆ ಪರಿಸ್ಥಿತಿಯನ್ನು ಸುಧಾರಿಸುತ್ತೇವೆ ಎಂದು ಭರವಸೆ ನೀಡಿದೆ.

**ಇಂಡಿಗೋ ನೀಡಿದ ಕಾರಣಗಳು:**

ಇಂಡಿಗೋ ಸಂಸ್ಥೆಯು ವಿಮಾನ ಹಾರಾಟದ ಅಡಚಣೆಗೆ ಹಲವು ಅನಿರೀಕ್ಷಿತ ಕಾರ್ಯಾಚರಣೆಗಳನ್ನ ತಿಳಿಸಿವೆ ಅವುಗಳೆಂದರೆ: ನಿನ್ನೆ (ಎರಡನೇ ದಿನ) ಬೆಂಗಳೂರಿನಿಂದ 43 ಇಂಡಿಗೋ ವಿಮಾನಗಳ ಹಾರಾಟವನ್ನು ರದ್ದುಗೊಳಿಸಲಾಗಿತ್ತು ಆದರೆ, ಇಂದು (ಮೂರನೇ ದಿನ) ಈ ಸಂಖ್ಯೆ ಮತ್ತಷ್ಟು ಹೆಚ್ಚಾಗಿದ್ದು, ಒಟ್ಟು 73 ಇಂಡಿಗೋ ವಿಮಾನಗಳ ಹಾರಾಟವನ್ನು ರದ್ದುಗೊಳಿಸಲಾಗಿದೆ. ಇಂಡಿಗೋ ಪ್ರಯಾಣಿಕರು ತಮ್ಮ ಪ್ರವಾಸವನ್ನು ರದ್ದುಗೊಳಿಸುವುದು ಇಲ್ಲವೇ ಬೇರೆ ವಿಮಾನಯಾನ ಸಂಸ್ಥೆಗಳನ್ನು ಆಶ್ರಯಿಸುವುದು ಅನಿವಾರ್ಯವಾಗಿದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.